EMAIL : dairyadadaari@gmail.com ಸಂಪುಟ: 01 ಸಂಚಿಕೆ: 169
ಬೆಲೆ ರೂ : 2.00
ರಾಯಚೂರು
ಪುಟ: 4

# ಧೈರ್ಯದ ದಾರಿ

DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಶುಕ್ರವಾರ: 12-06-2026

## "ಸಿಂಧನೂರಿನ ವಿವಿಧ ಕಚೇರಿಗಳಿಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ದಿಢೀರ್ ಭೇಟಿ; ಸೇವಾ ಗುಣಮಟ್ಟ ಸುಧಾರಣೆಗೆ ಸೂಚನೆ"

ಧೈರ್ಯದ ದಾರಿ



**ರಾಯುಚೂರು ಜೂನ್ 11:** ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಬುಧವಾರ ಬೆಳಿಗ್ಗೆ ಜಿಲ್ಲೆಯ ಸಿಂಧನೂರು ನಗರದ ವಿವಿಧ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಮೊದಲು ಸಿಂಧನೂರಿನ ನಗರಸಭೆಗೆ ಆಗಮಿಸಿ, ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ನಗರಸಭೆಯ ವ್ಯಾಪ್ತಿಯಲ್ಲಿ ಸರಿಯಾಗಿ ಕಾಲಕಾಲಕ್ಕೆ ತೆರಿಗೆ ಸಂಗ್ರಹಿಸಬೇಕು. ನಗರದ ಜನರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಮುಂಗಾರು ಮಳೆ ಹೆಚ್ಚಿನ ಪ್ರಮಾಣದಲ್ಲಿ ಬರುವ ಸಾಧ್ಯತೆ ಇದೆ. ಆದ್ದರಿಂದ ಕುಡಿಯುವ ನೀರನ್ನು ಆಗಾಗ ಪರೀಕ್ಷೆ ಮಾಡಿ, ಶುದ್ಧ ಕುಡಿಯುವ ನೀರು ಪೂರೈಕೆಗೆ ಗಮನ ಹರಿಸಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಮುಂಜಾಗ್ರತೆವಹಿಸಬೇಕು. ಮಳೆ ನೀರು ಸರಾಗವಾಗಿ ಹರಿಯುವಂತಾಗಲು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಾಲುವೆ, ಚರಂಡಿಗಳನ್ನು ಸ್ವಚ್ಛಗೊಳಿಸುವ ಕಾರ್ಯ ಆಗಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಸಿಂಧನೂರು ನಗರದ ವಿವಿಧ ರಸಗೊಬ್ಬರ ಹಾಗೂ ಕೀಟ ನಾಶಕ ಅಂಗಡಿಗಳಿಗೆ ಭೇಟಿ ನೀಡಿ, ದಾಸ್ತಾನು ಪುಸಕ್ತ, ರಶೀದಿ ಪುಸ್ತಕಗಳನ್ನು ಪರಿಶೀಲಿಸಿದರು. ಅಲ್ಲದೇ ಗ್ರಾಹಕರಿಗೆ ಯಾವ ದರದಲ್ಲಿ ಇವುಗಳನ್ನು ಮಾರಾಟ ಮಡಲಾಗುತ್ತಿದೆ. ದರ ಪಟ್ಟಿಯನ್ನು ಹಾಕಲಾಗಿದೆಯೇ ಎಂಬ ಬಗ್ಗೆ ಮಾಹಿತಿ ಪಡೆದರು. ರೈತರಿಗೆ ಅನುಕೂಲವಾಗುಂತೆ ರಸ ಗೊಬ್ಬರ ದಾಸ್ತಾನು ಮಾಡಬೇಕೆಂದು ಅಂಗಡಿಯ ಮಾಲೀಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ನಂತರ ಬಸ್ ನಿಲ್ದಾಣದ ಹತ್ತಿರವಿರುವ ಇಂದಿರಾ ಕ್ಯಾಂಟೀನ್ ಗೆ ಭೇಟಿ ನೀಡಿ, ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ಊಟ, ತಿಂಡಿ ಪೂರೈಸುವ ಉದ್ದೇಶದಿಂದ ಸರ್ಕಾರ ಇಂದಿರಾ ಕ್ಯಾಂಟೀನ್‌ಗಳನ್ನು ಆರಂಭಿಸಿದೆ. ಕಡಿಮೆ ವೆಚ್ಚದ ಆಹಾರಗಳನ್ನು





ಪೂರೈಕೆ ಮಾಡುವ ಜೊತೆಗೆ ಕ್ಯಾಟೀನ್‌ನಲ್ಲಿ ಸ್ವಚ್ಛತೆ ಮತ್ತು ಗ್ರಾಹಕರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಂತರ ಸಿಂಧನೂರಿನ ತಾಲೂಕು ಸಾರ್ವಜನಿಕ 2ನೇಪುಟಕ್ಕೆ

## ಸಿರವಾರ ಪಟ್ಟಣದಲ್ಲಿ ಇಂದು ವಿದ್ಯುತ್ ವ್ಯತ್ಯಯ: ಸಾರ್ವಜನಿಕರಿಗೆ ಜೆಸ್ಕಾಂ ಮನವಿ

ಧೈರ್ಯದ ದಾರಿ

**ಸಿರವಾರ :** ಪಟ್ಟಣದಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ನಡೆಯುತ್ತಿದ್ದು, ಈ ಹಿನ್ನೆಲೆಯಲ್ಲಿ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸುವ ಕೆಲಸ ಕೈಗೊಳ್ಳಲಾಗಿದೆ. ಈ ಕಾರಣದಿಂದಾಗಿ ಇಂದು ದಿನಾಂಕ 12.06.2026 ರಂದು ಸಿರವಾರ ಪಟ್ಟಣದಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಜೆಸ್ಕಾಂ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಂಇಇ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯಯದ ವಿವರ:
ದಿನಾಂಕ: 12.06.2026
ಸಮಯ: ಬೆಳಿಗ್ಗೆ 10:00 ಗಂಟೆಯಿಂದ ಮಧ್ಯಾಹ್ನ 2:00 ಗಂಟೆಯವರೆಗೆ.
ವ್ಯಾಪ್ತಿ: ಭಾಗ್ಯನಗರ್ ಕೆನಲ್ನಿಂದ ದೇವದುರ್ಗ ಕ್ರಾಸ್ ವರೆಗೆ ರೋಡ್ ಅಗಲಿಕರಣ ವಿದ್ಯುತ್ ಕಂಬಗಳನ್ನು ಸ್ಥಳಾಂತರ ರಸ್ತೆ ಅಗಲೀಕರಣ ಕಾಮಗಾರಿಯ ಹಿತದೃಷ್ಟಿಯಿಂದ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸುವುದು ಅನಿವಾರ್ಯವಾಗಿದೆ. ಆದ್ದರಿಂದ ಸಾರ್ವಜನಿಕರು ಮತ್ತು ಗ್ರಾಹಕರು ಸಹಕರಿಸಬೇಕೆಂದು ಜೆಸ್ಕಾಂ ಇಲಾಖೆಯ ಅಧಿಕಾರಿಗಳು ಮನವಿ ಮಾಡಿದ್ದಾರೆ.

### ಸ್ಪರ್ಧಾತ್ಮಕ ಪರೀಕ್ಷಾ ಪುಸ್ತಕ ಉಚಿತ ವಿತರಣೆ

## ಸ್ಪರ್ಧಾತ್ಮಕ ಸಮುದ್ರದಲ್ಲಿ ಈಜಿ ಗೆದ್ದು ಬನ್ನಿ: ಭೀಮರಾಯ್ ಬಿ. ರಾಮಸಮುದ್ರ



ಧೈರ್ಯದ ದಾರಿ

**ಮಾನ್ವಿ, ಜೂ.11:** ನಗರದ ಉಚಿತ 24/7 ಗ್ರಂಥಾಲಯದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ತಾಲೂಕು ದಂಡಾಧಿಕಾರಿ ಹಾಗೂ ಗ್ರಂಥಾಲಯದ ಸಂಸ್ಥಾಪಕ ಭೀಮರಾಯ್ ಬಿ. ರಾಮಸಮುದ್ರ ಅವರು ತಮ್ಮ ತಂಡದೊಂದಿಗೆ ರಚಿಸಿರುವ "ಜೇಡರ ಬಲೆ" ಎಂಬ 25 ಸಾವಿರ ಪ್ರಶ್ನೋತ್ತರಗಳನ್ನು ಒಳಗೊಂಡ ಸಾಮಾನ್ಯ ಜ್ಞಾನ ಪುಸ್ತಕವನ್ನು ಉಚಿತವಾಗಿ ವಿತರಿಸಿದರು.

ಬಳಿಕ ವಿದ್ಯಾರ್ಥಿಗಳಿಗೆ ದಿಕ್ಸೂಚಿ ಭಾಷಣ ಮಾಡಿದ ಭೀಮರಾಯ್ ಬಿ. ರಾಮಸಮುದ್ರ ಅವರು, "ನಾನು ವಿದ್ಯಾರ್ಥಿಯಾಗಿದ್ದಾಗ ಅನುಭವಿಸಿದ ಕಷ್ಟಗಳನ್ನು ಇಂದಿನ ವಿದ್ಯಾರ್ಥಿಗಳು ಅನುಭವಿಸಬಾರದು ಎಂಬ ಉದ್ದೇಶದಿಂದ ನನ್ನಿಂದಾಗುವ ಅಳಿಲು ಸೇವೆಯನ್ನು ಮಾಡುತ್ತಿದ್ದೇನೆ. ಇಂದಿನ ಸ್ಪರ್ಧಾತ್ಮಕ ಜಗತ್ತು ಒಂದು ಸಮುದ್ರದಂತಿದ್ದು, ಅದರಲ್ಲಿ ಯಶಸ್ಸಿನ ದಡ ತಲುಪಬೇಕಾದರೆ ನಿರಂತರ ಅಧ್ಯಯನ ಮತ್ತು ಉತ್ತಮ ಪುಸ್ತಕಗಳ ಸಹಕಾರ ಅಗತ್ಯವಾಗಿದೆ. ಯುವಕರು ತಮ್ಮ ಸಮಯವನ್ನು ವ್ಯರ್ಥ ಮಾಡದೇ, ಮೊಬೈಲ್ ಅಡಿಕ್ಷನ್ ಎಂಬ ಪಿಡುಗಿನಿಂದ ದೂರವಿದ್ದು, ಸ್ಪಷ್ಟ ಗುರಿಯೊಂದಿಗೆ ತಪಸ್ಸಿನಂತೆ ಓದಿದರೆ ಸರ್ಕಾರಿ ಹುದ್ದೆಗಳನ್ನು ಪಡೆಯಲು ಸಾಧ್ಯ. ನಮ್ಮ ಭಾಗಕ್ಕೆ ಅಂಟಿಕೊಂಡಿರುವ ಹಿಂದುಳಿದ ಹೈದರಾಬಾದ್-ಕರ್ನಾಟಕ ಪ್ರದೇಶದ ಹಣೆಪಟ್ಟಿಯನ್ನು ತೆಗೆದುಹಾಕುವ ಜವಾಬ್ದಾರಿ ಯುವಕರ ಮೇಲಿದೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ಪರ್ಧಾರ್ಥಿಗಳು, "ಮಾನ್ವಿಗೆ ಬಂದಿರುವ ಅನೇಕ ಅಧಿಕಾರಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಹೆಚ್ಚಿನ ಗಮನ ಹರಿಸಿರಲಿಲ್ಲ. ಆದರೆ ಭೀಮರಾಯ್ ಸರ್ ಅವರು ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗ ಪಡೆಯಲು ಸೂಕ್ತ ವಾತಾವರಣ ನಿರ್ಮಿಸಿ, ಪುಸ್ತಕಗಳ ವಿತರಣೆ ಹಾಗೂ ನಿರಂತರ ಮಾರ್ಗದರ್ಶನದ ಮೂಲಕ ಪ್ರೋತ್ಸಾಹಿಸುತ್ತಿರುವುದು ನಮಗೆ ಹೊಸ ಉತ್ಸಾಹ ನೀಡಿದೆ. ಇಂತಹ ಅಧಿಕಾರಿಗಳು ದೊರೆತಿರುವುದು ನಮ್ಮ ಸೌಭಾಗ್ಯದ ಸಂಗತಿ" ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿದಾರ ಮಹಿಬೂಬ್ ಮದ್ಲಾಪುರ, ಖಾಸಗಿ ಉಪನ್ಯಾಸಕರ ಸಂಘದ ಅಧ್ಯಕ್ಷ ಆಂಜನೇಯ ನಸ್ಲಾಪುರ, ಶಿಕ್ಷಕರ ಸಂಘದ ಸಂಗಮೇಶ ಮುದೋಳ್, ಬಸವರಾಜ್, ಅಜೀಜ್, ಶ್ರೀಧರ್ ಸೇರಿದಂತೆ ಅನೇಕ ಸ್ಪರ್ಧಾರ್ಥಿಗಳು ಉಪಸ್ಥಿತರಿದ್ದರು.

## ಸೇವಾ ಪದವಿ ಕಾಲೇಜಿನ ಉಪನ್ಯಾಸಕಿ ರಾಜಶ್ರೀಗೆ ಡಾಕ್ಟರೇಟ್ ಗೌರವ

ಧೈರ್ಯದ ದಾರಿ

**ರಾಯಚೂರು, ಜೂನ್ 11:** ಸಮಾಜದ ಅಂಚಿನಲ್ಲಿರುವ ಕೊಳೆಗೇರಿ ಪ್ರದೇಶದ ಮಹಿಳೆಯರ ಆರೋಗ್ಯ ಮತ್ತು ಶಿಕ್ಷಣ ಸ್ಥಿತಿಗತಿಯನ್ನು ಆಳವಾಗಿ ಅಧ್ಯಯನ ಮಾಡಿದ ಸಂಶೋಧನೆಗೆ ಮನ್ನಣೆ ದೊರೆತಿದ್ದು, ಸೇವಾ ಪದವಿ ಕಾಲೇಜಿನ ಉಪನ್ಯಾಸಕಿ ಕು. ರಾಜಶ್ರೀ ಅವರಿಗೆ ರಾಜಸ್ಥಾನದ ಅಲ್ವಾರ್‌ನ ಸನ್ ರೈಸ್ ವಿಶ್ವವಿದ್ಯಾಲಯ ಸಮಾಜಶಾಸ್ತ್ರ ವಿಷಯದಲ್ಲಿ ಪಿಎಚ್‌ಡಿ ಪದವಿ ಪ್ರದಾನ ಮಾಡಿದೆ.

ಶ್ರೀಮತಿ ಹಾಗೂ ಶ್ರೀ ನಿರ್ಮಲ ಶಾಂತಿ ಸುಂದರಾಜ್ ಅವರ ಪುತ್ರಿಯಾದ ರಾಜಶ್ರೀ ಅವರು, ಮಾರ್ಗದರ್ಶಕರಾದ ಡಾ. ಸೈಯದ್ ಅಹ್ಮದ್ ಶೇಕ್ ಅವರ ಮಾರ್ಗದರ್ಶನದಲ್ಲಿ "ರಾಯಚೂರು ಜಿಲ್ಲೆಯ ಕೊಳೆಗೇರಿ ಪ್ರದೇಶದ ಮಹಿಳೆಯರ ಆರೋಗ್ಯ ಮತ್ತು ಶಿಕ್ಷಣ ಸ್ಥಿತಿಗತಿ: ಒಂದು ಸಮಾಜಶಾಸ್ತ್ರೀಯ ವಿಶ್ಲೇಷಣೆ" ಎಂಬ ವಿಷಯದ ಕುರಿತು ಸಂಶೋಧನೆ ನಡೆಸಿದ್ದಾರೆ.

ಸಂಶೋಧನೆಯ ಅಂಗವಾಗಿ ರಾಯಚೂರು ನಗರ ಹಾಗೂ ಸುತ್ತಮುತ್ತಲಿನ 12ಕ್ಕೂ ಹೆಚ್ಚು ಕೊಳೆಗೇರಿ ಪ್ರದೇಶಗಳಲ್ಲಿ




ಕ್ಷೇತ್ರಕಾರ್ಯ ನಡೆಸಿ, 500ಕ್ಕೂ ಅಧಿಕ ಮಹಿಳೆಯರನ್ನು ಸಂದರ್ಶಿಸಿ ಪ್ರಾಥಮಿಕ ಮಾಹಿತಿ ಸಂಗ್ರಹಿಸಲಾಗಿದೆ.

ಅಧ್ಯಯನದಲ್ಲಿ ಕೊಳೆಗೇರಿ ಪ್ರದೇಶಗಳ ಮಹಿಳೆಯರಲ್ಲಿ ರಕ್ತಹೀನತೆ ಹಾಗೂ ಪೌಷ್ಟಿಕಾಂಶದ ಕೊರತೆ ಸಾಮಾನ್ಯವಾಗಿದ್ದು, ಸರ್ಕಾರಿ ಆರೋಗ್ಯ ಸೇವೆಗಳ ಕುರಿತು 2ನೇಪುಟಕ್ಕೆ

## ಕರೇಗುಡ್ಡ ಗ್ರಾಮದಲ್ಲಿ 60 ಲಕ್ಷ ವೆಚ್ಚದಲ್ಲಿ ವಿವಿಧ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಕರೇಗುಡ್ಡ ಗ್ರಾಮದಲ್ಲಿನ ಶ್ರೀ ಮಹಾಂತೇಶ್ವರಮಠದ ಆವರಣದಲ್ಲಿ ಸಿ.ಸಿ.ರಸ್ತೆ ಕಾಮಗಾರಿಗೆ ಮಾಜಿ ಸಚಿವ ಹಾಗೂ ವಿಧಾನಪರಿಷತ್ ಸದಸ್ಯ ಎನ್.ಎಸ್.ಬೋಸರಾಜು ಶಂಕುಸ್ಥಾಪನೆ ನೆರಬೇರಿಸಿ ಮಾತನಾಡಿ ಈ ಭಾಗದ ಜನರ ಬಹುದಿನಗಳ ಬೇಡಿಕೆಯಂತೆ ಶ್ರೀ ಮಹಾಂತೇಶ್ವರ ಮಹಾಸ್ವಾಮಿಗಳ ಮಠದಿಂದ ಗ್ರಾಮದ ಮಾರೆಮ್ಮ ಗುಡಿಯವರಿಗೆ 2025-26 ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ 10 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ಹಾಗೂ ಹಿರೇಹಣಿಗಿ- ಹಿರೇಕೋಟ್ನೆಕಲ್ ಮುಖ್ಯ ರಸ್ತೆಯಲ್ಲಿ ಬರುವ ಕರೇಗುಡ್ಡಕ್ರಾಸ್ ನಿಂದ ಕರೇಗುಡ್ಡ ಗ್ರಾಮದಲ್ಲಿನ ಶ್ರೀ ಮಹಾಂತೇಶ್ವರ ಮಹಾಸ್ವಾಮಿಗಳ ಮಠದ ವರೆಗೆ ಸಂಪರ್ಕ ಕಲ್ಪಿಸುವ ರಸ್ತೆಗೆ ಡಾಂಬರೀಕರಣ 446 ಮೀ ರಸ್ತೆಯನ್ನು ಕೆ.ಕೆ.ಆರ್.ಡಿ.ಬಿ. ಮೈಕ್ರೋ ಯೋಜನೆಯಡಿಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಅಂದಾಜು 50 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಶಾಸಕ ಹಂಪಯ್ಯನಾಯಕ ರಸ್ತೆ ಕಾಮಗಾರಿಯನ್ನು ಅದಷ್ಟು ಬೇಗನೆ ಉತ್ತಮ ಗುಣಮಟ್ಟದಲ್ಲಿ ಕಾಮಗಾರಿಯನ್ನು ಕೈಗೊಳ್ಳುವಂತೆ ಗುತ್ತಿಗೆದಾರರಿಗೆ ಹಾಗೂ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಶ್ರೀ ಮಹಾಂತೇಶ್ವರಮಠದ ಶ್ರೀ ಮಹಾಂತಲಿಂಗಮಹಾಸ್ವಾಮಿಗಳು, ಮುಖಂಡರಾದ ರುದ್ರಪ್ಪ ಅಂಗಡಿ, ಬಸವರಾಜ ಪಾಟೀಲ್ ಅತನೂರ್, ಅಮರೇಗೌಡ ಹಂಚಿನಾಳ, ರಾಜಾ ಸುಭಾಷ್ ಚಂದ್ರ ನಾಯಕ, ರಾಜಶೇಖರ್ ಪಾಟೀಲ್ ಜಾನೇಕಲ್, ಅಂಬಣ್ಣ ಪಾಟೀಲ್, ಬಸವಲಿಂಗಪ್ಪ ಗೌಡ, ದೊಡ್ಡ ಬಸಪ್ಪ, ಚಂದ್ರಪ್ಪ ಸಾಹುಕರ್ ಬ್ಯಾಗವಾಟ, ರಂಗನಾಥ ನಾಯಕ, ಶಿವು, ಮಾಹಾಂತೇಶ ನಕ್ಕುಂದಿ , ಚನ್ನಬಸವ ನಾಯಕ, ಬುಡ್ಡಪ್ಪ , ಶಂಕರ ದೊರೆ , ಲಕ್ಷ್ಮಣ ತಳವಾರ ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದರು.

## ಚುಕ್ಕಿ ಪ್ರತಿಷ್ಠಾನದ ಸುವರ್ಣ ಸಂಭ್ರಮ: ಸಿರವಾರದಲ್ಲಿ ಸಡಗರದ ಬಸವತ್ವ ಚಿಂತನ ಗೋಷ್ಠಿ



ಧೈರ್ಯದ ದಾರಿ

**ಸಿರವಾರ, ಜೂನ್ 11:** ಪಟ್ಟಣದ ಚುಕ್ಕಿ ಪ್ರತಿಷ್ಠಾನದ ವತಿಯಿಂದ ಲಿಂ. ಚುಕ್ಕಿ ಉಮಾಪತಪ್ಪ ಅವರ 50ನೇ ವರ್ಷದ ಪುಣ್ಯಸ್ಮರಣೆ ಹಾಗೂ 'ಬಸವತ್ವ ಚಿಂತನ ಗೋಷ್ಠಿ' ಅಂಗವಾಗಿ ಹಮ್ಮಿಕೊಂಡಿದ್ದ "ಸುವರ್ಣ ಸಂಭ್ರಮ" ಕಾರ್ಯಕ್ರಮ ಗುರುವಾರ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ಮೆರವಣಿಗೆಯ ಸಂಭ್ರಮ: ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ಶ್ರೀ ಬಸವಾದಿ ಶರಣರ ಪೂಜೆ ನೆರವೇರಿಸಲಾಯಿತು. ನಂತರ, ಈಶ್ವರ ದೇವಸ್ಥಾನದಿಂದ ರುದ್ರಮ್ಮ ಉಮಾಪತಪ್ಪ ಕಲ್ಯಾಣ ಮಂಟಪದವರೆಗೆ ಬಸವಣ್ಣನವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು. ಈ ಸಂದರ್ಭದಲ್ಲಿ ದಾವಣಗೆರೆಯ ಬಸವ ಕಲಾ ಬಳಗದ ತಂಡವು ಪ್ರಸ್ತುತಪಡಿಸಿದ ವಚನ ಭಜನೆ ಮೆರವಣಿಗೆಗೆ ವಿಶೇಷ ಮೆರಗು ನೀಡಿತು.

ವಿಚಾರಗೋಷ್ಠಿ: ಕಾರ್ಯಕ್ರಮದಲ್ಲಿ ಷಟಸ್ಥಲ ಧ್ವಜಾರೋಹಣ ಮತ್ತು ಶರಣಪ್ಪ ಗೋನಾಳ ತಂಡದವರಿಂದ ವಚನ ಗಾಯನ ಕಾರ್ಯಕ್ರಮಗಳು ಜರುಗಿದವು. 2ನೇಪುಟಕ್ಕೆ

ಮೊದಲನೇ ಪುಟದಿಂದ

# ಸೇವಾ ಪದವಿ ಕಾಲೇಜಿನ ಉಪನ್ಯಾಸಕಿ ರಾಜಶ್ರೀಗೆ ಡಾಕ್ಟರೇಟ್ ಗೌರವ

ಸಮರ್ಪಕ ಅರಿವು ಇಲ್ಲದಿರುವುದು ಬೆಳಕಿಗೆ ಬಂದಿದೆ. ಪ್ರಾಥಮಿಕ ಹಂತದಲ್ಲಿ ಬಾಲಕಿಯರ ಶಾಲಾ ಹಾಜರಾತಿ ಉತ್ತಮವಾಗಿದ್ದರೂ, ಪ್ರೌಢಶಿಕ್ಷಣ ಮತ್ತು ಪದವಿ ಹಂತದಲ್ಲಿ ಆರ್ಥಿಕ ಸಮಸ್ಯೆ, ಕೌಟುಂಬಿಕ ಜವಾಬ್ದಾರಿ ಹಾಗೂ ಸುರಕ್ಷತೆಯ ಕಾರಣಗಳಿಂದ ಶಿಕ್ಷಣ ಅರ್ಧಕ್ಕೆ ನಿಲ್ಲುವ ಪ್ರಮಾಣ ಹೆಚ್ಚಿರುವುದು ಕಂಡುಬಂದಿದೆ.

ಮಹಿಳೆಯರಲ್ಲಿ ಆರೋಗ್ಯ ಜಾಗೃತಿ ಮತ್ತು ಶಿಕ್ಷಣದ ಮಹತ್ವವನ್ನು ಹೆಚ್ಚಿಸಲು ಸ್ವಸಹಾಯ ಗುಂಪುಗಳು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸ್ಥಳೀಯ ಸಂಘಟನೆಗಳು ನಿರಂತರವಾಗಿ ಕಾರ್ಯನಿರ್ವಹಿಸಬೇಕು ಎಂದು ತಮ್ಮ ಸಂಶೋಧನಾ ಪ್ರಬಂಧದಲ್ಲಿ ರಾಜಶ್ರೀ ಪ್ರತಿಪಾದಿಸಿದ್ದಾರೆ. ಜೊತೆಗೆ, ಸರ್ಕಾರಿ ಯೋಜನೆಗಳ ಮಾಹಿತಿಯನ್ನು ಸರಳ ಕನ್ನಡದಲ್ಲಿ ಕಿರು ಹೊತ್ತಿಗೆಗಳ ಮೂಲಕ ಮಹಿಳೆಯರಿಗೆ ತಲುಪಿಸುವ ಅಗತ್ಯವಿದೆ ಎಂಬ ಸಲಹೆಯನ್ನೂ ನೀಡಿದ್ದಾರೆ.

ಸಮಾಜದ ಅಂಚಿನಲ್ಲಿರುವ ಮಹಿಳೆಯರ ಜೀವನ ಸ್ಥಿತಿಯನ್ನು ದಾಖಲಿಸುವುದರ ಜೊತೆಗೆ, ಅವರ ಅಭಿವೃದ್ಧಿಗೆ ಅಗತ್ಯವಾದ ಪರಿಹಾರ ಮಾರ್ಗಗಳನ್ನು ಸೂಚಿಸಿರುವ ಈ ಸಂಶೋಧನೆ ರಾಯಚೂರು ಜಿಲ್ಲೆಯ ನೀತಿ ರೂಪಕರು ಹಾಗೂ ಮಹಿಳಾ ಅಭಿವೃದ್ಧಿ ಇಲಾಖೆಗೆ ಮಾರ್ಗದರ್ಶಕವಾಗಲಿದೆ ಎಂದು ಶಿಕ್ಷಣ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ರಾಜಶ್ರೀ ಅವರ ಈ ಸಾಧನೆಗೆ ಕುಟುಂಬದವರು, ಸೇವಾ ಪದವಿ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕ ವರ್ಗ, ವಿದ್ಯಾರ್ಥಿಗಳು ಹಾಗೂ ಗಣ್ಯರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# ಚುಕ್ಕಿ ಪ್ರತಿಷ್ಠಾನದ ಸುವರ್ಣ ಸಂಭ್ರಮ: ಸಿರವಾರದಲ್ಲಿ ಸಡಗರದ ಬಸವತ್ವ ಚಿಂತನ ಗೋಷ್ಠಿ

ಬೆಳಿಗ್ಗೆ 10:30ಕ್ಕೆ ಆರಂಭವಾದ "ವಿಷಪೂರಿತ ಸನ್ನಿವೇಶದಲ್ಲಿ ಬಸವತ್ವದ ಅವಶ್ಯಕತೆ" ಕುರಿತಾದ ಚಿಂತನ ಗೋಷ್ಠಿಯಲ್ಲಿ ಅನೇಕ ಚಿಂತಕರು ಪಾಲ್ಗೊಂಡು ವಿಚಾರ ಮಂಡಿಸಿದರು.
ಗಣ್ಯರ ಉಪಸ್ಥಿತಿ: ಮಾಜಿ ಸಚಿವ ಎನ್.ಎಸ್. ಬೋಸರಾಜು ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಆಳಂದದ ಪೂಜ್ಯ ವಿಶ್ವನಾಥ ಕೋರಣೇಶ್ವರ ಸ್ವಾಮಿಗಳು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮಾನ್ವಿ ಶಾಸಕ ಜಿ. ಹಂಪಯ್ಯನಾಯಕ, ಡಾ. ಜೆ.ಎಸ್. ಪಾಟೀಲ್, ಜ್ಯೋತಿ ಅಕ್ಕ ಸೇರಿದಂತೆ ನಾಡಿನ ಅನೇಕ ಗಣ್ಯರು ಹಾಗೂ ಸಾವಿರಾರು ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು.

## “ಸಿಂಧನೂರಿನ ವಿವಿಧ ಕಚೇರಿಗಳಿಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ದಿಢೀರ್ ಭೇಟಿ; ಸೇವಾ ಗುಣಮಟ್ಟ ಸುಧಾರಣೆಗೆ ಸೂಚನೆ”

ಆಸ್ಪತ್ರೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ದಿಢೀರ್ ಭೇಟಿ ನೀಡಿ, ಆಸ್ಪತ್ರೆಯ ಮೂಲಸೌಕರ್ಯ ಹಾಗೂ ಕುಂದು ಕೊರತೆಗಳ ಬಗ್ಗೆ ಪರಿಶೀಲಿಸಿದರು.
ಸಿಬ್ಬಂದಿಯ ಹಾಜರಾತಿ ಪುಸ್ತಕ, ಕಚೇರಿ ಖರ್ಚು ವೆಚ್ಚದ ಕಡತಗಳನ್ನು ಪರಿಶೀಲಿಸಿ, ಸಮಯಕ್ಕೆ ಸರಿಯಾಗಿ ಕೆಲಸಕ್ಕೆ ಹಾಜರಿರಬೇಕು ಎಂದು ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಸೂಚನೆ ನೀಡಿದರು. ನಂತರ ವಾರ್ಡ್ಗಳಿಗೆ ತೆರಳಿ ರೋಗಿಗಳ ಆರೋಗ್ಯ ವಿಚಾರಿಸಿದರು.
ಔಷಧ ಉಗ್ರಾಣ ಪರಿಶೀಲಿಸಿ, ಔಷಧಗಳನ್ನು ರೋಗಿಗಳಿಗೆ ಸಮರ್ಪಕವಾಗಿ ವಿತರಣೆ ಮಾಡುವಂತೆ ಸೂಚಿಸಿದರು. ಯಾವುದೇ ಕಾರಣಕ್ಕೂ ಖಾಸಗಿ ಔಷಧ ಅಂಗಡಿಗಳಲ್ಲಿ ಖರೀದಿಸಲು ಚೀಟಿ ಬರೆದುಕೊಟ್ಟಿದ್ದು ಕಂಡು ಬಂದಲ್ಲಿ ಶಿಸ್ತುಕ್ರಮ ಕೈಗೊಳ್ಳುವುದಾಗಿ ವೈದ್ಯರಿಗೆ ಎಚ್ಚರಿಕೆ ನೀಡಿದರು.
ಆಸ್ಪತ್ರೆಯ ಸ್ವಚ್ಛತೆಗೆ ಒತ್ತು ನೀಡಬೇಕು, ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡುವುದರ ಜೊತೆಗೆ ಸೌಜನ್ಯವಾಗಿ ವರ್ತಿಸಬೇಕು ಎಂದರು.
ನಂತರ ಸಿಂಧನೂರಿನ ತಹಶಿಲ್ದಾರ್ ಕಚೇರಿಗೆ ಭೇಟಿ ನೀಡಿ, ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಜನರಿಗೆ ಉತ್ತಮ ಆಡಳಿತ ನೀಡಬೇಕು. ಸಾರ್ವಜನಿಕರನ್ನು ವಿನಾ ಕಾರಣ ಅಲೆದಾಡುವುದನ್ನು ತಪ್ಪಿಸಬೇಕು ಎಂದು ಹೇಳಿದ ಜಿಲ್ಲಾಧಿಕಾರಿಗಳು ತಾಲೂಕು ಆಡಳಿತದ ಕಾರ್ಯಗಳ ಪ್ರಗತಿ ಪರಿಶೀಲಿಸಿ, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿದರು.
ಸಂಜೆ ತುರ್ವಿಹಾಳ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಕೆರೆಯ ಅಭಿವೃದ್ಧಿ ಕಾಮಗಾರಿಯನ್ನು ವೀಕ್ಷಣೆ ಮಾಡಿದರು. ಇದೇ ಸಂದರ್ಭದಲ್ಲಿ ಲಿಂಗಸುಗೂರು ವಿಭಾಗದ ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ಸಿಂಧನೂರು ಪೌರಾಯುಕ್ತ ಪಾಂಡುರಂಗ ಇಟಗಿ, ಸಿಪಿಐ ವೀರರೆಡ್ಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಮೃತನ ವಾರಸುದಾರರ ಪತ್ತೆಗೆ ರೈಲ್ವೇ ಪೊಲೀಸರ ಮನವಿ

ಧೈರ್ಯದ ದಾರಿ



**ರಾಯಚೂರು ಜೂನ್ 11 :** ಯಾದಗಿರಿ ರೈಲ್ವೇ ನಿಲ್ದಾಣದ ಹತ್ತಿರ ಡೌನ್‌ಲೈನ್ ರೈಲು ಹಳಿಯಲ್ಲಿ ರೈಲ್ವೇ ಕೀ.ಮೀ ನಂ 632/26 ನೇದ್ದರಲ್ಲಿ ಸುಮಾರು 75 ವರ್ಷ ವಯಸ್ಸಿನ ಅಪರಿಚಿತ ಗಂಡಸ್ಸು ರೈಲು ಹಳಿಗಳನ್ನು ದಾಟುವಾಗ ಯಾವುದೋ ಚಲಿಸುವ ರೈಲು ಗಾಡಿಯಿಂದ ಗಾಯಗೊಂಡಿದ್ದೇನೆ. ಚಿಕಿತ್ಸೆ ಕುರಿತು ಯಿಮ್ಸ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಚಿಕೀತ್ಸೆ ಫಲಕಾರಿಯಾಗದೇ ಆಕಸ್ಮಿಕವಾಗಿ ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಯು.ಡಿ.ಆರ್ ನಂ: 28/2026 ಕಲಂ 194 ಬಿ.ಎನ್.ಎಸ್.ಎಸ್ ರಿತ್ಯಾ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.
ಮೃತದೇಹ ದೊರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ. ಆದ್ದರಿಂದ ಮೃತನ ವಾರುಸುದಾರ ಪತ್ತೆ ಹಾಗೂ ಪಿ.ಎಂ.ಇ. ಸಲುವಾಗಿ ಮೃತದೇಹವನ್ನು ಯಾದಗಿರಿಯ ಯಿಮ್ಸ ಆಸ್ಪತ್ರೆಗೆ ಶೀತಲ ಶವಗಾರದಲ್ಲಿ ಇಡಲಾಗಿದೆ. ಅಪರಿಚಿತ ಗಂಡಸ್ಸು ವಯಸ್ಸು ಸುಮಾರು 75 ವರ್ಷ, ಎತ್ತರ ಸುಮಾರು 5.8 ಅಡಿ, ಸಾದಾಕಪ್ಪು ಮೈ ಬಣ್ಣ, ಉದ್ದ ಮುಖ, ಕಪ್ಪು ಕಣ್ಣುಗಳು, ಬಿಳಿ ಗಡ್ಡ ಮೀಸೆ ಹೊಂದಿರುತ್ತಾನೆ. ಬಡಕಲು ಶರೀರ ಮತ್ತು ತಲೆಯಲ್ಲಿ ಅರ್ದ ಇಂಚು ಬಿಳಿ ಕೂದಲು ಹೋಂದಿರುತ್ತಾನೆ. ಒಂದು ಬಿಳಿ ಬಣ್ಣದ ಜುಬ್ಬ ತೋಳಿನ ಶರ್ಟ, ಒಂದು ಬಿಳಿ ಬಣ್ಣದ ಪಂಚೆ, ಎಡಗಾಲಿಗೆ ಹಸಿರು ಬಣ್ಣದ ರಬ್ಬರ್ ಹಾಕಿದ್ದಾನೆ.
ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತನ ಹೋಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ನಂ: 08532-231716 ಅಥವಾ ಮೊಬೈಲ್ ಸಂಖ್ಯೆ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಕಾಲ ಸಮಾಲೋಚಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಜೂನ್ 11:** ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಜಿಲ್ಲೆಯ ಕಂದಾಯ ಹಾಗೂ ಇತರೆ ಇಲಾಖೆಗಳ ಸೇವೆಗಳನ್ನು ಸಕಾಲದಲ್ಲಿ ಮೇಲ್ವಿಚಾರಣೆ ಹಾಗೂ ಸಕಾಲ ತಂತ್ರಾಂಶದ ಸಮಸ್ಯೆಗಳನ್ನು ಬಗೆಹರಿಸಲು ನೈಪುಣ್ಯತೆ ಹೊಂದಿದವರನ್ನು ಸಕಾಲ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.
ಬಿ.ಇ ಅಥವಾ ಬಿ.ಟೆಕ್/ಬಿಸಿಎ ವಿದ್ಯಾರ್ಹತೆ ಹೊಂದಿರಬೇಕು. ತಿಂಗಳಿಗೆ 27,100ರೂ. ಸಂಭಾವನೆಯನ್ನು ನೀಡಲಾಗುತ್ತಿದ್ದು, ಆಸಕ್ತರು ಜೂನ್ 19ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಜೂನ್ 22ರಂದು ನೇರ ಸಂದರ್ಶನ ನಡೆಯಲಿದೆ.
ಹೆಚ್ಚಿನ ಮಾಹಿತಿಗಾಗಿ ನೂತನ ಜಿಲ್ಲಾಧಿಕಾರಿಗಳ ಕಚೇರಿಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಬಾಲಕಾರ್ಮಿಕ ದಿನಾಚರಣೆ ಅರ್ಥಪೂರ್ಣ ಆಚರಣೆಗೆ ಕ್ರೈ ಸಂಸ್ಥೆ ಮನವಿ



ಧೈರ್ಯದ ದಾರಿ

**ಮಾನ್ವಿ, ಜೂನ್ 11:** ಜೂನ್ 12 ರಂದು ಆಚರಿಸಲಾಗುವ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಕ್ರೈ (CRY) ಸಂಸ್ಥೆ ತಾಲೂಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂಬಂಧ ಕ್ರೈ ಸಂಸ್ಥೆಯ ಸಿರವಾರ ತಾಲೂಕು ಸಂಯೋಜಕಿ ಶಶಿಕಲಾ ಹಾಗೂ ಮಾನ್ವಿ ತಾಲೂಕು ಸಂಯೋಜಕಿ ಗೀತಾ ಅವರು ಸಿರವಾರ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಮಾನ್ವಿ ತಾಲೂಕಿನ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದಾರೆ,
ಮನವಿಯಲ್ಲಿ ಬಾಲಕಾರ್ಮಿಕ ಪದ್ಧತಿ ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ಸಮಾಜದಿಂದ ಈ ಅನಿಷ್ಟ ಪದ್ಧತಿ ಸಂಪೂರ್ಣ ನಿರ್ಮೂಲನೆಯಾಗಬೇಕಾಗಿದೆ ಎಂದು ತಿಳಿಸಲಾಗಿದೆ. ಹೋಟೆಲ್‌ಗಳು, ಗ್ಯಾರೇಜ್‌ಗಳು, ಅಂಗಡಿಗಳು, ಕೃಷಿ ಚಟುವಟಿಕೆಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಕ್ಕಳನ್ನು ದುಡಿಸಿಕೊಳ್ಳದಂತೆ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು ಎಂದು ಒತ್ತಾಯಿಸಲಾಗಿದೆ.
ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಪುನಃ ಶಾಲೆಗೆ ಸೇರಿಸುವುದು, ಬಾಲಕಾರ್ಮಿಕರಾಗಿ ದುಡಿಯುತ್ತಿರುವ ಮಕ್ಕಳಿಗೆ ಶಿಕ್ಷಣದ ಮುಖ್ಯವಾಹಿನಿಗೆ ಮರಳಲು ಅವಕಾಶ ಕಲ್ಪಿಸುವುದು ಹಾಗೂ ಮಕ್ಕಳ ಹಕ್ಕುಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಬಾಲ್ಯವು ಪ್ರತಿಯೊಂದು ಮಗುವಿನ ಮೂಲಭೂತ ಹಕ್ಕಾಗಿದ್ದು, ಶಿಕ್ಷಣ, ಆರೋಗ್ಯ ಮತ್ತು ಸುರಕ್ಷಿತ ವಾತಾವರಣ ದೊರಕುವಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕ್ರೈ ಸಂಸ್ಥೆಯ ಪ್ರತಿನಿಧಿಗಳು ತಿಳಿಸಿದರು.
ಈ ಸಂದರ್ಭದಲ್ಲಿ ಮಕ್ಕಳ ಸಂಘಗಳ ಸದಸ್ಯರು ಹಾಗೂ ಕ್ರೈ ಸಂಸ್ಥೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಪ್ರಕಾಶ್ ಚವಾಣ್ ರಿಂದ ಪಟ್ಟಣದ ವಿವಿಧ ರಸಗೋಬ್ಬರ ಅಂಗಡಿಗಳ ಪರಿಶೀಲನೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ವಿವಿಧ ರಸಗೊಬ್ಬರ ಅಂಗಡಿಗಳಿಗೆ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಪ್ರಕಾಶ್ ಚವಾಣ್ ಹಾಗೂ ತಾಲೂಕು ಸಹಾಯಕ ಕೃಷಿ ನಿರ್ದೇಶಕ ಗುರುನಾಥ್ ಭೂಸನೂರ್ ಜಂಟಿಯಾಗಿ ಭೇಟಿ ನೀಡಿ ರಸಗೊಬ್ಬರ ದಾಸ್ತನು ಪರಿಶೀಲನೆ ನಡೆಸಿ ಮಾತನಾಡಿ ಜಿಲ್ಲೆಯಲ್ಲಿ ಯೂರಿಯಾ ಸೇರಿದಂತೆ ಎಲ್ಲಾ ಅಗತ್ಯ ರಸಗೊಬ್ಬರಗಳು ಅಗತ್ಯ ದಾಸ್ತನು ಲಾಭ್ಯವಿದು ರಸಗೊಬ್ಬರ ಮಾರಾಟಗಾರರು ಜಿಲ್ಲಾಧಿಕಾರಿಗಳ ಆದೇಶದಂತೆ, ರೈತರ ಎಫ್.ಐ.ಡಿ ಸಂಖ್ಯೆಯನ್ನು ಪಡೆದುಕೊಂಡು ಕೆ-ಕಿಸಾನ್ ಪೋರ್ಟಲ್ ಮೂಲಕ ಕೆ.ಕಿಸಾನ್ ಆಫ್ ಮೂಲಕವೇ ಯೂರಿಯಾ ರಸಗೊಬ್ಬರವನ್ನು ವಿತರಿಸಬೇಕು.ರೈತರಿಗೆ ರಸಗೊಬ್ಬರಗಳನ್ನು ಚೀಲದ ಮೇಲೆ ಮುದ್ರಿತವಾಗಿರುವ ಗರಿಷ್ಠ ಚಿಲ್ಲರೆ ಬೆಲೆಗೆ ಮಾತ್ರ ಮಾರಾಟ ಮಾಡಬೇಕು. ಯೂರಿಯಾ ಗೊಬ್ಬರದ ಜೊತೆಗೆ ಬೇರೆ ಯಾವುದೇ ಜೈವಿಕ ಗೊಬ್ಬರ ಅಥವಾ ನ್ಯಾನೋ ಯೂರಿಯಾವನ್ನು ಲಿಂಕ್ ಮಾಡಿ ಕಡ್ಡಾಯವಾಗಿ ಖರೀದಿಸುವಂತೆ ರೈತರನ್ನು ಒತ್ತಾಯಿಸಬಾರದು. ರೈತರಿಂದ ಹೆಚ್ಚಿನ ದರ ವಸೂಲಿ ಮಾಡಿದಲ್ಲಿ, ರಸಗೊಬ್ಬರ ಕೃತಕ ಅಭಾವ ಸೃಷ್ಟಿಸಿದಲ್ಲಿ ಅಂತಹ ಮಾರಾಟಗಾರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.
ಸಿರವಾರ ಕೃಷಿ ಅಧಿಕಾರಿ ಅಮರೇಶ್ ಸೇರಿದಂತೆ ಕೃಷಿ ಅಧಿಕಾರಿಗಳ ತಂಡದಿಂದ ಪಟ್ಟಣದಲ್ಲಿ ಕೃಷಿಪರಿಕರಗಳ ಹಾಗೂ ರಸಗೊಬ್ಬರ ಮಾರಾಟ ಮಾಡುವ ಅಂಗಡಿಗಳನ್ನು ಪರಿಶೀಲಿಸಲಾಯಿತು.

# ಇಂದು ನಗರದಲ್ಲಿ ಜೆಸ್ಕಾಂನಿಂದ ವಿದ್ಯುತ್ ವ್ಯತ್ಯಯ

**ರಾಯಚೂರು ಜೂನ್ 11:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ2ರ 11ಕೆವಿಯಲ್ಲಿ ತುರ್ತು ಕಾಮಗಾರಿ ಹಮ್ಮಿಕೊಂಡ ಪ್ರಯುಕ್ತ ಜೂನ್ 12ರ ಬೆಳಿಗ್ಗೆ 10ರಿಂದ ಮಧ್ಯಾಹ್ನ 1ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಕೋರಲಾಗಿದೆ.ಅಂದು ಬೆಳಿಗ್ಗೆ 10ರಿಂದ ಶಿವಂ ಅಸ್ಪತ್ರೆ, ಮಾಂಗಲ್ಯ ಶಾಪಿಂಗ್ ಮಾಲ್, ಲೋಹಾರ ವಾಡಿ, ಗಾಂಧಿ ಚೌಕ, ಬಂದಾರ ಗಾಲ್ಲಿ, ಎಂ.ಜಿ.ರಸ್ತೆ, ಹರಿಹರ ರಸ್ತೆ, ಮಕ್ತಲ ಪೇಟೆ, ಪಿಂಜರವಾಡಿ, ಶರಣಬಸವೇಶ್ವರ ಆಸ್ಪತ್ರೆ. ಬೆಟ್ಟದೂರ ಆಸ್ಪತ್ರೆ, ಪ್ಯಾರೇಸ್ ಗಾರ್ಡನ್, .ಕುಂಬಾರ ಓಣಿ, ಮಡ್ಡಿ ಪೇಟೆ , ಬ್ರೆಸ್ತಾವಾರ ಪೇಟೆ, ಚಂದ್ರಮಾಳೇಶ್ವರ ಚೌಕ, ಅರಬ್ ಮೌಲ್ಲಾ, ಲಾಲಾ ಪಹಡಿ, ಡಿ.ಸಿ. ಆಫೀಸ್, ಆಟೋ ನಗರ, ಮಹಾನಗರ ಪಾಲಿಕೆ, ಗೋಶಾಲ ರಸ್ತೆ, ಸಿಯಾತ ಲಾಬ್, ಮಕ್ತಲ್ ಪೇಟೆ, ಗಂಜ್‌ರೋಡ್, ಸುಖಾಣಿ ಕಾಲೋನಿ, ಎಟಿ.ಪಿಟಿ ರೋಡ್, ಮೇದಾರ ವಾಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ನಿರಂತರ ಸೇವಾ ಕೇಂದ್ರ ದೂರವಾಣಿ ಸಂಖ್ಯೆ: 08532-226386,08532-231999, 9448395622ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಲಬಾಧೆಯಿಂದ ರೈತ ಆತ್ಮಹತ್ಯೆ

**ತಾಳಿಕೋಟೆ:ಜೂ.11:** ತಾಲೂಕಿನ ಫೀರಾಪೂರ ಗ್ರಾಮದ ರೈತ ದೇವಪ್ಪ ರಾಯಪ್ಪ ಹಾಲನ್ನವರ 37 ಸಾಲದ ಬಾಧೆಯಿಂದ ಬುಧುವಾರರಂದು ಮುಂಜಾನೆ 9 ಗಂಟೆಯ ಸುಮಾರಿಗೆ ಊರ ಮುಂದಿನ ತನ್ನ ಜಮೀನಿನಲ್ಲಿಯ ಗಿಡಕ್ಕೆ ನೇಣು ಬೀಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ.ಜಮೀನಿನ ಸಾಗುವಳಿಗಾಗಿ ಹಾಗೂ ವಯಸ್ಸಾದ ನಮ್ಮ ಅತ್ತೆಯ ಚಿಕಿತ್ಸೆಯ ಸಲುವಾಗಿ ಕೊಡಗಾನೂರ ಎಸ್.ಬಿ.ಐ ಬ್ಯಾಂಕಿನಲ್ಲಿ 26000/- ರೂ. ಬೆಳೆಸಾಲ ಹಾಗೂ ಊರಲ್ಲಿ ಕೈಗಡ



ಅಂತಾ 5 ಲಕ್ಷ ರೂ ಸಾಲ ಮಾಡಿಕೊಂಡಿದ್ದು ಕಳೆದ ಎರಡು ಮೂರು ವರ್ಷದಿಂದ ಸರಿಯಾಗಿ ಬೆಳೆ ಬಾರದ ಕಾರಣ ಮಾಡಿದ ಸಾಲವನ್ನ ತಿರಿಸಲಾಗದೆ ಸಾಲಕ್ಕೆ ಮನನೊಂದು ಊರ ಮುಂದಿನ ತಮ್ಮದೇ ಹೊಲದಲ್ಲಿನ ಶಂಕೇಶ್ವರ ಗಿಡಕ್ಕೆ ಲುಂಗಿಯಿಂದಾ ನೇಣುಬೀಗಿದಿಕೊಂಡು ಆತ್ಮಹತ್ಯೆ ಮಾಡಿದ್ದಾನೆಂದು ಮೃತ ದೇವಪ್ಪನ ಪತ್ನಿ ಸುಶಿಲಮ್ಮ ಹಾಲನ್ನವರ ತಾಳಿಕೋಟೆ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ.

# 2,400 ಕೋಟಿ ವಂಚನೆ ಪ್ರಕರಣ ನಟಿ ಸನ್ನಿಗೆ ಸಿಐಡಿ ನೋಟಿಸ್



**ಬೆಂಗಳೂರು,ಜೂ11:** ರಾಜ್ಯದಲ್ಲಿ ತೀವ್ರ ಸಂಚಲನ ಮೂಡಿಸಿರುವ 2,400 ಕೋಟಿ ಮೌಲ್ಯದ 'ಶಿವಂ ಅಸೋಸಿಯೇಟ್ಸ್' ಹೂಡಿಕೆ ವಂಚನೆ ಪ್ರಕರಣದ ತನಿಖೆ ಚುರುಕುಗೊಂಡಿದ್ದು, ಬಾಲಿವುಡ್ ನಟಿ ಸನ್ನಿ ಲಿಯೋನ್ ಈಗ ಕರ್ನಾಟಕ ಅಪರಾಧ ತನಿಖಾ ಇಲಾಖೆ ದಾಳಿ ನಡೆಸಿದೆ. ವಂಚನೆ ಪ್ರಕರಣದ ಪ್ರಮುಖ ಆರೋಪಿ ನಿರ್ಮಿಸಿದ್ದ ಚಲನಚಿತ್ರದಲ್ಲಿ ನಟಿಸಿದ್ದಕ್ಕಾಗಿ ಸನ್ನಿ ಲಿಯೋನ್ ಪಡೆದಿದ್ದ ಸಂಭಾವನೆಯ ವಿವರಗಳನ್ನು ಕೋರಿ ಸಿಐಡಿ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ.


ಆದರೆ, ಈ ನೋಟಿಸ್ ಕೇವಲ ತನಿಖೆಯ ಭಾಗವಾಗಿದ್ದು, ನಟಿಯ ಯಾವುದೇ ತಪ್ಪು ಅಥವಾ ಅಪರಾಧವನ್ನು ಇದು ಸೂಚಿಸುವುದಿಲ್ಲ ಎಂದು ತನಿಖಾಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಶಿವಂ ಅಸೋಸಿಯೇಟ್ಸ್ ಸಂಸ್ಥೆಯ ಪ್ರವರ್ತಕ ಶಿವಾನಂದ್ ನೀಲಣ್ಣವರ್, ಸಾರ್ವಜನಿಕರಿಗೆ ಹೆಚ್ಚಿನ ಲಾಭದ ಆಮಿಷ ಒಡ್ಡಿ ಅನಧಿಕೃತ ಠೇವಣಿ ಮತ್ತು ಹೂಡಿಕೆ ಯೋಜನೆಗಳ ಮೂಲಕ ಸುಮಾರು 40,700 ಹೂಡಿಕೆದಾರರಿಂದ ಕೋಟ್ಯಂತರ ರೂಪಾಯಿ ಹಣ ಸಂಗ್ರಹಿಸಿ ವಂಚಿಸಿರುವ ಗಂಭೀರ ಆರೋಪ ಎದುರಿಸುತ್ತಿದ್ದಾರೆ. ಸದ್ಯ ಸಿಐಡಿ ಪೊಲೀಸರು ಈ ಸಂಸ್ಥೆಗೆ ಸಂಬಂಧಿಸಿದ ಹಣದ ವರ್ಗಾವಣೆ ಮತ್ತು ವ್ಯವಹಾರಗಳ ಜಾಡನ್ನು ಬೆನ್ನಟ್ಟಿದ್ದಾರೆ.

ಆರೋಪಿ ಶಿವಾನಂದ್ ನೀಲಣ್ಣವರ್ ನಿರ್ಮಿಸಿದ್ದ, 2023ರಲ್ಲಿ ಬಿಡುಗಡೆಯಾದ 'ಚಾಂಪಿಯನ್' ಎಂಬ ಕನ್ನಡ ಚಲನಚಿತ್ರದ "ಡಿಂಗರ ಬಿಲ್ಲಿ ನಾನು" ಎಂಬ ವಿಶೇಷ ಹಾಡಿನಲ್ಲಿ ಸನ್ನಿ ಲಿಯೋನ್ ನಟಿಸಿದ್ದರು. ಈ ಹಾಡಿನಲ್ಲಿ ಹೆಜ್ಜೆ ಹಾಕಲು ಸನ್ನಿ ಲಿಯೋನ್ ಅವರಿಗೆ ಸುಮಾರು 1 ಕೋಟಿ ಸಂಭಾವನೆ ನೀಡಲಾಗಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ. ಹೂಡಿಕೆದಾರರಿಂದ ವಂಚಿಸಿದ ಹಣವನ್ನೇ ಈ ಚಿತ್ರದ ನಿರ್ಮಾಣಕ್ಕೆ ಬಳಸಲಾಗಿದೆಯೇ ಮತ್ತು ಆ ಹಣವೇ ನಟಿಗೆ ಸಂದಾಯವಾಗಿದೆಯೇ ಎಂಬ ಹಣದ ಹರಿವನ್ನು ಪರಿಶೀಲಿಸಲು ಸಿಐಡಿ ಮಾಹಿತಿ ಕೋರಿದೆ.

"ಇದು ಕೇವಲ ಹಣದ ವರ್ಗಾವಣೆಯ ಮೂಲವನ್ನು ಪತ್ತೆಹಚ್ಚುವ ಸಾಮಾನ್ಯ ತನಿಖಾ ಪ್ರಕ್ರಿಯೆಯಾಗಿದೆ. ನಟಿ ಸನ್ನಿ ಲಿಯೋನ್ ಅವರು ಈ ವಂಚನೆಯಲ್ಲಿ ಭಾಗಿಯಾಗಿದ್ದಾರೆ ಎಂದರ್ಥವಲ್ಲ. ವೃತ್ತಿಪರ ನಟಿಯಾಗಿ ಚಿತ್ರದಲ್ಲಿ ನಟಿಸಿದ್ದಕ್ಕಾಗಿ ಅವರು ಪಡೆದ ಸಂಭಾವನೆಯ ವಿವರಗಳನ್ನು ಮಾತ್ರ ಕೇಳಲಾಗಿದೆ."

# 10 ಕೋಟಿ ಬ್ಯಾರೆಲ್ ತೈಲ ಸಾಗಣೆ ಹಕ್ಕು ಕೊಂಡಾಡಿದ ಟ್ರಂಪ್



**ವಾಷಿಂಗ್ಟನ್‌ಜೂ11:**ಯುನೈಟೆಡ್ ಸ್ಟೇಟ್ಸ್ ಮಿಲಿಟರಿಯು ಹಾರ್ಮುಜ್ ಜಲಸಂಧಿಯಲ್ಲಿ ಈ ಹಿಂದೆ ಬಹಿರಂಗಪಡಿಸದ ಅತ್ಯಂತ ರಹಸ್ಯ ಕಾರ್ಯಾಚರಣೆಯೊಂದನ್ನು ಯಶಸ್ವಿಯಾಗಿ ನಡೆಸಿದ್ದು, ಇದರ ಮೂಲಕ 100 ಮಿಲಿಯನ್ (10 ಕೋಟಿ) ಬ್ಯಾರೆಲ್‌ಗೂ ಹೆಚ್ಚು ಕಚ್ಚಾ ತೈಲವನ್ನು ಸುರಕ್ಷಿತವಾಗಿ ಸಾಗಿಸಲು ಸಹಾಯ ಮಾಡಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಕಟಿಸಿದ್ದಾರೆ.

ಇದೇ ವೇಳೆ, ಪ್ರಸ್ತುತ ನಡೆಯುತ್ತಿರುವ ಶಾಂತಿ ಒಪ್ಪಂದದ ಮಾತುಕತೆಗಳು ವಿಫಲವಾದರೆ ಇರಾನ್ ಮೇಲೆ ತೀವ್ರ ಸರಣಿ ದಾಳಿ ನಡೆಸಲಾಗುವುದು ಎಂದು ಅವರು ಕಠಿಣ ಎಚ್ಚರಿಕೆ ನೀಡಿದ್ದಾರೆ. ಟ್ರಂಪ್ ತಮ್ಮ 'ಟ್ರುತ್ ಸೋಶಿಯಲ್' ಖಾತೆಯಲ್ಲಿ ಈ ಬಗ್ಗೆ ಬರೆದುಕೊಂಡಿದ್ದು, "ಕಳೆದ ತಿಂಗಳು, ಹೋರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುವ ತೈಲ ಟ್ಯಾಂಕರ್‌ಗಳು ಮತ್ತು ಇತರ ವಾಣಿಜ್ಯ ಹಡಗುಗಳಿಗೆ ರಕ್ಷಣೆ ನೀಡಲು ನಾನು ನಮ್ಮ ಶ್ರೇಷ್ಠ ಯುಎಸ್ ಮಿಲಿಟರಿಗೆ ರಹಸ್ಯ ಮಿಷನ್ ಕೈಗೊಳ್ಳಲು ಆದೇಶಿಸಿದೆ. ಇಂದು ಈ ಪ್ರಯತ್ನದ ಫಲವಾಗಿ 10 ಕೋಟಿಗೂ ಹೆಚ್ಚು ಬ್ಯಾರೆಲ್ ತೈಲವು ಜಲಸಂಧಿಯನ್ನು ದಾಟಿ ಮುಕ್ತ ಮಾರುಕಟ್ಟೆಯನ್ನು ತಲುಪಿದೆ ಎಂದು ತಿಳಿಸಲು ನನಗೆ ಸಂತೋಷವಾಗುತ್ತಿದೆ. 200ಕ್ಕೂ ಹೆಚ್ಚು ವಾಣಿಜ್ಯ ಹಡಗುಗಳು ಸುರಕ್ಷಿತವಾಗಿ ಸಂಚರಿಸಿವೆ" ಎಂದಿದ್ದಾರೆ.

ಮುಂದುವರಿದು, "ಈ ಭಾರಿ ಯಶಸ್ಸಿಗೆ ಕಾರಣ ಏನೆಂದರೆ, ಹಾರ್ಮುಜ್ ಜಲಸಂಧಿಯನ್ನು ಯುನೈಟೆಡ್ ಸ್ಟೇಟ್ಸ್ ನಿಯಂತ್ರಿಸುತ್ತಿದೆಯೇ ಹೊರತು ಇರಾನ್ ಅಲ್ಲ. ಅವರ ಮಿಲಿಟರಿ ಸೋತಿದೆ ಮತ್ತು ಅವರ ಆರ್ಥಿಕತೆ ಧ್ವಂಸಗೊಂಡಿದೆ. ಇರಾನ್ ಕಥೆ ಮುಗಿದಿದೆ!" ಎಂದು ಟ್ರಂಪ್ ಪ್ರತಿಪಾದಿಸಿದ್ದಾರೆ.

ಶ್ವೇತಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಇರಾನ್ ಜೊತೆಗಿನ ರಾಜತಾಂತ್ರಿಕ ಮಾತುಕತೆಗಳು ಸಫಲವಾಗದಿದ್ದರೆ ಅಮೆರಿಕ ಬಲವಾದ ಮಿಲಿಟರಿ ಕ್ರಮ ಕೈಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದರು."ನಾವು ಅವರ ಮೇಲೆ ಅತ್ಯಂತ ಕಠಿಣವಾಗಿ ದಾಳಿ ಮಾಡಲಿದ್ದೇವೆ" ಎಂದು ಟ್ರಂಪ್ ಎಚ್ಚರಿಸಿದ್ದಾರೆ. ಇತ್ತೀಚೆಗೆ ಹಾರ್ಮುಜ್ ಜಲಸಂಧಿಯಲ್ಲಿ ಇರಾನ್ ಅಮೆರಿಕದ 'ಅಪಾಚೆ' ಹೆಲಿಕಾಪ್ಟರ್ ಅನ್ನು ಹೊಡೆದುರುಳಿಸಿದ್ದಕ್ಕೆ ವಾಷಿಂಗ್ಟನ್ ಈ ಪ್ರತಿಕ್ರಿಯೆ ನೀಡುತ್ತಿದ್ದು, ಮಿಲಿಟರಿ ಕಾರ್ಯಾಚರಣೆ ತಕ್ಷಣವೇ ಪ್ರಾರಂಭವಾಗಬಹುದು ಎಂದು ಅವರು ಸೂಚನೆ ನೀಡಿದ್ದಾರೆ. ಆದಾಗ್ಯೂ, ತಮಗೆ ಇನ್ನು ಕೂಡ ರಾಜತಾಂತ್ರಿಕ ಪರಿಹಾರದ ಮೇಲೆಯೇ ಆಸಕ್ತಿ ಇದೆ ಎಂದು ಟ್ರಂಪ್ ಹೇಳಿದ್ದಾರೆ.

ಜಾಗತಿಕ ತೈಲ ಬೆಲೆ ನಿಯಂತ್ರಣದ ದಾವೆ

ಫೆಬ್ರವರಿ 28 ರಂದು ಸಂಘರ್ಷ ಆರಂಭವಾಗುವ ಮೊದಲು, ವಿಶ್ವದ ಒಟ್ಟು ತೈಲ ಮತ್ತು ಅನಿಲ ಪೂರೈಕೆಯ ಸುಮಾರು ಐದನೇ ಒಂದು ಭಾಗ ಈ ಕಿರಿದಾದ ಹಾರ್ಮುಜ್ ಜಲಸಂಧಿಯ ಮೂಲಕವೇ ಸಾಗುತ್ತಿತ್ತು. ಸೌದಿ ಅರೇಬಿಯಾ, ಇರಾಕ್, ಯುಎಇ, ಕುವೈತ್ ಮತ್ತು ಕತಾರ್‌ನಂತಹ ದೇಶಗಳಿಗೆ ಇದು ಪ್ರಮುಖ ರಫ್ತು ಮಾರ್ಗವಾಗಿದೆ.

ಈ ರಹಸ್ಯ ಕಾರ್ಯಾಚರಣೆಯು ಜಾಗತಿಕ ತೈಲ ಮಾರುಕಟ್ಟೆಯನ್ನು ಸ್ಥಿರಗೊಳಿಸಲು ಸಹಾಯ ಮಾಡಿದೆ ಎಂದು ಟ್ರಂಪ್ ಹೇಳಿಕೊಂಡಿದ್ದಾರೆ. "ನಾನು ಇಂದು ಮೊದಲ ಬಾರಿಗೆ ಇದನ್ನು ಘೋಷಿಸುತ್ತಿದ್ದೇನೆ, ಆದರೆ ನಾವು ಪ್ರತಿ ರಾತ್ರಿ ಲಕ್ಷಾಂತರ ಬ್ಯಾರೆಲ್ ತೈಲವನ್ನು ಹೊರತೆಗೆಯುತ್ತಿದ್ದೇವೆ. ಈ ಕಾರ್ಯಾಚರಣೆಯಿಂದಾಗಿಯೇ ಇಂದು ತೈಲ ಬೆಲೆ ಬ್ಯಾರೆಲ್‌ಗೆ 250 ಡಾಲರ್ ತಲುಪುವ ಬದಲು 85 ರಿಂದ 90 ಡಾಲರ್ ಆಸುಪಾಸಿನಲ್ಲಿದೆ" ಎಂದು ಅವರು ವಿವರಿಸಿದ್ದಾರೆ.

# ಕಾಂಗ್ರೆಸ್ ಸರ್ಕಾರದ ವಿರುದ್ಧ ದಲಿತ ಸಂಘಟನೆಗಳ ಆಕ್ರೋಶ




**ಬೆಂಗಳೂರು.ಜೂ11:** ಕಾಂಗ್ರೆಸ್ ಸರ್ಕಾರದಲ್ಲಿ ದಲಿತ ಸಮುದಾಯದ ರಾಜಕೀಯ ನಾಯಕರನ್ನು ಕಡೆಗಣಿಸಿರುವುದನ್ನು ಖಂಡಿಸಿ ರಾಜ್ಯ ದಲಿತ ಸಂಘಟನೆಗಳ ಒಕ್ಕೂಟ ನೇತೃತ್ವದಲ್ಲಿ 10ಕ್ಕೂ ಅಧಿಕ ಸಂಘಟನೆಗಳು ಸ್ವಾತಂತ್ರ್ಯ ಉದ್ಯಾನದಲ್ಲಿ ಗುರುವಾರ ಪ್ರತಿಭಟಿಸಿ ಆಕ್ರೋಶ ವ್ಯಕ್ತಪಡಿಸಿದ್ದವು.

ಶೋಷಿತರ ಸ್ವಾಭಿಮಾನದ ಹೋರಾಟ' ಎಂಬ ಹೆಸರಿನಲ್ಲಿ ನಡೆದ ರಾಜ್ಯಮಟ್ಟದ ಪ್ರತಿಭಟನೆಗೆ ದಲಿತ ಸಂಘಟನೆಗಳ ಹತ್ತಾರು ಪ್ರಮುಖ ನಾಯಕರು, ಕರ್ನಾಟಕದ ಛಲವಾದಿ ಮಹಾಸಭಾದ ಪದಾಧಿಕಾರಿಗಳು ಬೆಂಬಲ ವ್ಯಕ್ತಪಡಿಸಿ ಕಾಂಗ್ರೆಸ್ ವಿರುದ್ಧ ಘೋಷಣೆ ನಮ್ಮ ಬೇಡಿಕೆ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯವ್ಯಾಪಿ ಉಗ್ರ ಹೋರಾಟ ಮಾಡಲಾಗುವುದು. ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಕಾಂಗ್ರೆಸ್ಸಿನ ದಲಿತ ವಿರೋಧಿ ನೀತಿಗೆ ಮತಗಳ ಮೂಲಕ ತಕ್ಕ ಪಾಠ ಕಲಿಸಲಾಗುವುದು ಎಂದು ಸಂಘಟನೆಗಳ ಮುಖಂಡರು, ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದರು.

ಉರಿಲಿಂಗ ಪೆದ್ದಿಮಠದ ಶ್ರೀ ಜ್ಞಾನಪ್ರಕಾಶ್ ಸ್ವಾಮೀಜಿ ಮಾತನಾಡಿ, ಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನೂತನ ಸಚಿವ ಸಂಪುಟ ರಚನೆಯಾಗಿದೆ. ಕಾಂಗ್ರೆಸ್ಸಿನ ಬೆನ್ನೆಲುಬಾಗಿ ನಿಲ್ಲುತ್ತಾ ಬಂದಿರುವ ದಲಿತ ಸಮುದಾಯದ ರಾಜಕೀಯ ನಾಯಕರನ್ನು ತುಳಿಯುವ ಕೆಲಸವಾಗುತ್ತಿದೆ. ದಿ. ಬಿ. ಬಸವಲಿಂಗಪ್ಪ, ಕೆ.ಎಚ್. ರಂಗನಾಥ್, ಬಿ.ರಾಚಯ್ಯ, ಎನ್. ರಾಚಯ್ಯ, ಶ್ರೀನಿವಾಸ್ ಪ್ರಸಾದ್ ಮತ್ತು ಟಿ.ಎ. ನರಸಿಂಹಮೂರ್ತಿ ಅವರಂತಹ ಹತ್ತಾರು ಪ್ರಭಾವಿ ಮುಖಂಡರಿಗೆ ಈ ಹಿಂದೆ ಅನ್ಯಾಯ ಮಾಡಲಾಗಿತ್ತು.

ಈಗ ಮಲ್ಲಿಕಾರ್ಜುನ ಖರ್ಗೆ, ಡಾ.ಜಿ. ಪರಮೇಶ್ವರ್, ಡಾ. ಎಚ್.ಸಿ. ಮಹದೇವಪ್ಪ ಹಾಗೂ ಕೆ.ಎಚ್. ಮುನಿಯಪ್ಪ ಅವರಂತಹ ಹಿರಿಯ ನಾಯಕರನ್ನು ಸಿಎಂ ಹುದ್ದೆಗೆ ಪರಿಗಣಿಸದೆ ಕಾಂಗ್ರೆಸ್ ಸತತವಾಗಿ ದಲಿತ ವಿರೋಧಿ ಧೋರಣೆ ಮುಂದುವರಿಸಲಾಗಿದೆ ಎಂದು ಅಸಮಾಧಾನ ಹೊರಹಾಕಿದರು.

ಹಿರಿಯ ನಾಯಕರಾದ ಎಚ್.ಸಿ. ಮಹದೇವಪ್ಪನವರನ್ನು ಸಚಿವ ಸಂಪುಟದಿಂದ ಕೈಬಿಟ್ಟಿರುವುದು ಅತ್ಯಂತ ದುರದೃಷ್ಟಕರ ಸಂಗತಿಯಾಗಿದೆ. ಸಮುದಾಯದ ನಾಯಕತ್ವವನ್ನು ಹತ್ತಿಕ್ಕುವ ಮತ್ತು ನಾಶಮಾಡುವ ವ್ಯವಸ್ಥಿತ ಪ್ರಯತ್ನವಾಗಿದೆ. ನಾಯಕತ್ವ ನಾಶವಾದರೆ ಇಡೀ ಸಮುದಾಯವೇ ಅಸ್ತಿತ್ವ ಕಳೆದುಕೊಳ್ಳುತ್ತದೆ ಎಂದು ಸ್ವಾಮೀಜಿ ಎಚ್ಚರಿಸಿದರು.

ಆರ್‌ಪಿಐ(ಬಿ) ರಾಷ್ಟ್ರೀಯ ಅಧ್ಯಕ್ಷ ಡಾ.ಎನ್.ಮೂರ್ತಿ, ರಾಜ್ಯ ಆದಿಜಾಂಬವ ಸಂಘದ ಕಾಧ್ಯಕ್ಷ ಜಂಬೂದೀಪ ಸಿದ್ದರಾಜು, ಮೈಸೂರು ಮಹಾನಗರ ಪಾಲಿಕೆಯ ಮಾಜಿ ಮೇಯರ್ ಪುರುಷೋತ್ತಮ್, ದಲಿತ ಸಂಘರ್ಷ ಸಮಿತಿಯ ಡಾ.ಡಿ.ಜಿ.ಸಾಗರ್ ಸೇರಿ ಸಾವಿರಾರು ಜನರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

# ಸರ್ಕಾರಿ ನೌಕರನ ವೈಯಕ್ತಿಕ ಆಸ್ತಿ ವಿವರ ಆರ್‌ಟಿಐ ಅಡಿ ನೀಡುವುದು ಅಸಾಧ್ಯ



**ಬೆಂಗಳೂರು,ಜೂ.11–** ಆರೋಪಗಳು ಎಷ್ಟೇ ಗಂಭೀರವಾಗಿದ್ದರೂ ವ್ಯಕ್ತಿಯ ವೈಯಕ್ತಿಕ ಮಾಹಿತಿಯನ್ನು ಸಾರ್ವಜನಿಕ ಮಾಹಿತಿಯಾಗಿ ಪರಿವರ್ತಿಸಲು ಸಾಧ್ಯವಿಲ್ಲ ಎಂದಿರುವ ಹೈಕೋರ್ಟ್, ಒಬ್ಬ ವ್ಯಕ್ತಿಯು ಸರ್ಕಾರಿ ಅಧಿಕಾರಿಯಾಗಿದ್ದ ಮಾತ್ರಕ್ಕೆ ಆತನ ವೈಯಕ್ತಿಕ ಆಸ್ತಿ ಮತ್ತು ಜವಾಬ್ದಾರಿಗಳ ವಿವರಗಳನ್ನು ಮಾಹಿತಿ ಹಕ್ಕು ಕಾಯ್ದೆ (ಆರ್‌ಟಿಐ)ಯಡಿ ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದು ಆದೇಶಿಸಿದೆ.

ಅಲ್ಲದೆ, ಸಾರ್ವಜನಿಕ ಹಿತಾಸಕ್ತಿ ಇಲ್ಲದ ವೈಯಕ್ತಿಕ ಮಾಹಿತಿಗಳನ್ನು ಆರ್‌ಟಿಐ ಕಾಯ್ದೆಯ ಸೆಕ್ಷನ್ 8(1)(ಜೆ) ಅಡಿಯಲ್ಲಿ ವಿನಾಯಿತಿ ನೀಡಲಾಗಿದ್ದು, ಇಂತಹ ಮಾಹಿತಿಗಳನ್ನು ಒದಗಿಸುವಂತೆ ಒತ್ತಾಯಿಸುವುದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ ಎಂದು ನ್ಯಾಯಪೀಠ ತಿಳಿಸಿದೆ.

ಸರ್ಕಾರಿ ನೌಕರನ ಖಾಸಗಿ ಮಾಹಿತಿ ಒದಗಿಸಲು ನಿರಾಕರಿಸಿದ್ದ ಮಾಹಿತಿ ಆಯೋಗದ ಆದೇಶವನ್ನು ಪ್ರಶ್ನಿಸಿ ಬೆಂಗಳೂರಿನ ನಿವಾಸಿಯಾಗಿರುವ ಎಸ್ ಸಾವಿತ್ರಮ್ಮ ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕ ಸದಸ್ಯ ಪೀಠ, ಈ ಆದೇಶ ನೀಡಿದ್ದು, ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

ಒಬ್ಬ ವ್ಯಕ್ತಿ ಸರ್ಕಾರಿ ನೌಕರನಾದ ತಕ್ಷಣ ಆತನ ಪ್ರತಿಯೊಂದು ವೈಯಕ್ತಿಕ ಮಾಹಿತಿಯೂ ಸಾರ್ವಜನಿಕ ಆಸ್ತಿಯಾಗುವುದಿಲ್ಲ. ಅವರ ಉದ್ಯೋಗದ ಕಾರಣಕ್ಕೆ ಸಂಸತ್ತು ನೀಡಿದ ಗೌಪ್ಯತೆಯ ಹಕ್ಕಿನ ರಕ್ಷಣೆಯನ್ನು ಕಸಿದುಕೊಳ್ಳಲು ಸಾಧ್ಯವಿಲ್ಲ. ಅರ್ಜಿದಾರರು ಮತ್ತು ಸದರಿ ಅಧಿಕಾರಿಯ ನಡುವೆ ಇರುವುದು ಖಾಸಗಿ ಜಮೀನು ವಿವಾದ. ಅರ್ಜಿದಾರರ ವೈಯಕ್ತಿಕ ಕಾನೂನು ಹೋರಾಟಕ್ಕೆ ಪೂರಕವಾಗುವ ಉದ್ದೇಶ 'ಬೃಹತ್ ಸಾರ್ವಜನಿಕ ಹಿತಾಸಕ್ತಿ' ವ್ಯಾಪ್ತಿಗೆ ಬರುವುದಿಲ್ಲ. ಕೇವಲ ಒಬ್ಬ ವ್ಯಕ್ತಿಯ ಮೇಲೆ ಗಂಭೀರ ಆರೋಪಗಳನ್ನು ಮಾಡಿದ ತಕ್ಷಣ ಅವರ ವೈಯಕ್ತಿಕ ದಾಖಲೆಗಳನ್ನು ಆರ್‌ಟಿಐ ಮೂಲಕ ಪಡೆಯಲು ಅವಕಾಶ ನೀಡಿದರೆ, ಕಾಯ್ದೆಯ ಮೂಲ ಉದ್ದೇಶವೇ ಬುಡಮೇಲಾಗಲಿದೆ ಎಂದು ಎಚ್ಚರಿಸಿದೆ. ಅಲ್ಲದೆ, ಈ ರೀತಿಯ ಮಾಹಿತಿಯನ್ನು ಬಿಡುಗಡೆ ಮಾಡಲು ಭ್ರಷ್ಟಾಚಾರ ಬಯಲಿಗೆಳೆಯುವ ಅಥವಾ ಸಾರ್ವಜನಿಕ ಹಣದ ದುರುಪಯೋಗ ಸಾಬೀತುಪಡಿಸುವ ಬಲವಾದ ಸಾಕ್ಷ್ಯಗಳು ಇರಬೇಕು. ಈ ಪ್ರಕರಣದಲ್ಲಿ ಅಂತಹ ಸಂದರ್ಭಗಳಿಲ್ಲ. ಆದ್ದರಿಂದ ಅರ್ಜಿದಾರರು, ಸಿವಿಲ್ ಇಲ್ಲವೇ ಕ್ರಿಮಿನಲ್ ಪ್ರಕ್ರಿಯೆ ಮೂಲಕ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ತಿಳಿಸಿದೆ.

ಅರ್ಜಿದಾರರು ಕೋರಿರುವ ಆಸ್ತಿ ವಿವರಗಳು ಸಂಪೂರ್ಣವಾಗಿ ವೈಯಕ್ತಿಕ ಮಾಹಿತಿಯಾಗಿದ್ದು, ಆರ್‌ಟಿಐ ಕಾಯ್ದೆಯ ಸೆಕ್ಷನ್ 8(1)(ಜೆ) ಅಡಿಯಲ್ಲಿ ರಕ್ಷಣೆ ಪಡೆದಿವೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಕರ್ನಾಟಕ ಮಾಹಿತಿ ಆಯೋಗ ಮತ್ತು ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಮಾಹಿತಿ ನಿರಾಕರಿಸಿ ಹೊರಡಿಸಿದ ಆದೇಶದಲ್ಲಿ ಯಾವುದೇ ಕಾನೂನು ಲೋಪವಿಲ್ಲ ಎಂದು ಸ್ಪಷ್ಟಪಡಿಸಿ ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

ಪ್ರಕರಣದ ಹಿನ್ನೆಲೆ:

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ)ದಲ್ಲಿ 1990 ರಿಂದ 2002ರ ಅವಧಿಯಲ್ಲಿ ಕೇಂದ್ರ ಕಚೇರಿಯ ಡೆಪ್ಯುಟಿ ಕಂಟ್ರೋಲರ್ ಆಗಿ ಸೇವೆ ಸಲ್ಲಿಸುತ್ತಿದ್ದ ಎಸ್.ಪಿ. ಜಯಪಾಲ್ ಅವರು ಅರ್ಜಿದಾರರಾದ ಸಾವಿತ್ರಮ್ಮ ಅವರ ಆಸ್ತಿಗೆ ಸಂಬಂಧಿಸಿದಂತೆ ವಂಚನೆ ಮಾಡುವ ಮೂಲಕ ಮಾರಾಟ ಮಾಡಿದ್ದಾರೆ ಎಂದು ಆರೋಪವಿದೆ.

ಈ ಬಗ್ಗೆ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಬಾಕಿ ಇದೆ, ಈ ಹಿನ್ನೆಲೆಯಲ್ಲಿ ಜಯಪಾಲ್ ಅವರ ಆಸ್ತಿಯ ವಿವರಗಳನ್ನು ನೀಡಬೇಕು ಎಂದು ಕೋರಿ ಅರ್ಜಿದಾರರಾದ ಸಾವಿತ್ರಮ್ಮ ಅವರು, ಜಯಪಾಲ್ ಅವರಿಗೆ ಸಂಬಂಧಿಸಿದಂತೆ 1997 ರಿಂದ 2005ರವರೆಗಿನ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರಗಳನ್ನು ನೀಡುವಂತೆ ಕೆಎಸ್‌ಆರ್?ಟಿಸಿ ಮಾಹಿತಿ ಅಧಿಕಾರಿಗೆ ಅರ್ಜಿ ಸಲ್ಲಿಸಿದ್ದರು.

ಆಸ್ತಿ ವಿವರ ವಯಕ್ತಿಕ:

ಅರ್ಜಿಗೆ ಉತ್ತರಿಸಿದ್ದ ಕೆಎಸ್‌ಆರ್‌ಟಿಸಿ ಮಾಹಿತಿ ಅಧಿಕಾರಿ, ಜಯಪಾಲರ ಆಸ್ತಿಯ ವಿವರ ವೈಯಕ್ತಿಕವಾಗಿದೆ. ಅಲ್ಲದೆ, ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿಲ್ಲ. ಆದ ಕಾರಣ ಮಾಹಿತಿ ನೀಡಲು ಸಾಧ್ಯವಿಲ್ಲ ಎಂದು ತಿಳಿಸಿದ್ದರು. ಈ ಕ್ರಮವನ್ನು ಕರ್ನಾಟಕ ಮಾಹಿತಿ ಆಯೋಗ ಎತ್ತಿಹಿಡಿದಿತ್ತು. ಇದನ್ನು ಪ್ರಶ್ನಿಸಿ ಸಾವಿತ್ರಮ್ಮ ಹೈಕೋರ್ಟ್ ಮೆಟ್ಟಿಲೇರಿದ್ದರು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಅರ್ಜಿದರರು ಕೋರಿರುವ ಈ ಮಾಹಿತಿಯನ್ನು ಜಯಪಾಲ್ ಅವರು ಸಲ್ಲಿಸಿರುವ ಆದಾಯ ತೆರಿಗೆಯಲ್ಲಿ ಬಹಿಂಗ ಪಡಿಸಿರಲಿಲ್ಲ. ಆದ್ದರಿಂದ ಅವರ ಆಸ್ತಿಯ ವಿವರವನ್ನು ವೈಯಕ್ತಿಕ ಎಂದು ಪರಿಗಣಿಸಲಾಗುವುದಿಲ್ಲ. ಆದ್ದರಿಂದ ಮಾಹಿತಿ ಒದಗಿಸಲು ನಿರ್ದೇಶನ ನೀಡಬೇಕು ಎಂದು ಕೋರಿದ್ದರು.

# ಸಾಮಾಜಿಕ ಜಾಲತಾಣಗಳು ಪ್ರತಿಭಾ ಪ್ರದರ್ಶನದ ವೇದಿಕೆ



**ಬಳ್ಳಾರಿ, ಜೂ.11:** ಪ್ರತಿಭಾ ಪ್ರದರ್ಶನಕ್ಕೆ ಪ್ರಸ್ತುತ ದಿನಮಾನಗಳಲ್ಲಿ ಸಾಮಾಜಿಕ ಮಾಧ್ಯಮಗಳು ವೇದಿಕೆಯಾಗಿ ಮಾರ್ಪಾಟಾಗಿವೆ ಎಂದು ವಿವಿಯ ಕುಲಸಚಿವರಾದ ಪ್ರೊ. ವಿ ಲೋಕೇಶ್ ಹೇಳಿದರು.ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ ಬಿ ಆರ್ ಅಂಬೇಡ್ಕರ್ ಸಭಾಭವನದಲ್ಲಿ ದಿ. ರಮಣಿಕ ಗುಪ್ತ ಅವರ ಸ್ಮರಣಾರ್ಥ ಆಯೋಜಿಸಿರುವ 10 ದಿನಗಳ ರಾಷ್ಟ್ರೀಯ ರಂಗಭೂಮಿ ಕಾರ್ಯಾಗಾರದ ಸಮಾರೋಪ ಸಮಾರಂಭವನ್ನು ಪ್ರೊ ಶಾಂತನಾಯ್ಕ್ ಅವರ ರಚಿತ ವೇರಾಳು ನಾಟಕ ದೃಶ್ಯ ಪ್ರದರ್ಶಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಿಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿಕೊಳ್ಳಲು ಶ್ರಮವಹಿಸಿ. ವಿವಿಯ ವಿದ್ಯಾರ್ಥಿಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸುವಂತಾಗಲಿ ಎಂದು ಹಾರೈಸಿದರು. ಹತ್ತು ದಿನಗಳ ಕಾರ್ಯಾಗಾರವು ಯಶಸ್ವಿಯಾಗಿರುವುದು ಸಂತಸವಾಗಿದೆ ಎಂದರು.ಸಮಾರೋಪ ನುಡಿಯಲ್ಲಿ ಮಾತನಾಡಿದ ವಿಜಯನಗರ ಜಿಲ್ಲೆಯ, ಎನ್ ಎಸ್ ಡಿ ರಂಗ ನಿರ್ದೇಶಕರಾದ ಸಾಂಬಶಿವ ದಳವಾಯಿ, ಪ್ರತಿಯೊಬ್ಬರು ಸಾಹಿತ್ಯದ ರಸವನ್ನು ಸವಿಯುವ ಮೂಲಕ ಗುರುತಿಸಿಕೊಳ್ಳಬೇಕು. ಹತ್ತು ದಿನಗಳಲ್ಲಿ ನಾಟಕ ತರಬೇತಿ ಹಾಗೂ ನಾಟಕ ರಚನೆ ಸುಲಭದ ಮಾತಲ್ಲ. ನಾಟಕಕ್ಕೆ ನಿರ್ದಿಷ್ಟವಾದ ಸಮಯ ಬೇಕು. ಇಂತಹ ರಂಗಭೂಮಿ ಕಾರ್ಯಾಗಾರಗಳು ಮೈಸೂರು ಭಾಗಗಳಲ್ಲಿ ಕಾಣಿಸಿಕೊಳ್ಳುತ್ತಿದ್ದವು. ಬಳ್ಳಾರಿಯಲ್ಲಿ ಆಯೋಜಿಸಿದ್ದು ಸಂತಸಕರ ಎಂದರು.

ವಿವಿಯ ಕಲಾ ನಿಕಾಯದ ಡೀನರಾದ ಪ್ರೊ ರಾಬರ್ಟ್ ಜೋಸ್, ಟಿ. ಕೊಟ್ರಪ್ಪ ರಂಗಭೂಮಿ ಕಲಾವಿದೆ ವೀಣಾ, ರಂಗ ನಿರ್ದೇಶಕ ಮಹೇಶ್ ವೇದಿಕೆಯಲ್ಲಿದ್ದರು.ವಿಭಾಗದ ಮುಖ್ಯಸ್ಥರಾದ ಪ್ರೊ ಶಾಂತಾನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿ ಅತಿಥಿಗಳನ್ನು ಸ್ವಾಗತಿಸಿದರು. ಡಾ ಅಣ್ಣಾಜಿ ಕೃಷ್ಣಾರೆಡ್ಡಿ ನಿರೂಪಿಸಿ, ವಂದಿಸಿದರು.

ಈ ಸಂದರ್ಭದಲ್ಲಿ ಪ್ರೊ ಶಾಂತನಾಯ್ಕ್ ಅವರ ರಚಿತ ವೇರಾಳು ನಾಟಕವನ್ನು ಪ್ರದರ್ಶನ ಮಾಡಲಾಯಿತು.ನಾಟಕ ನಿರ್ದೇಶನ, ಜನಪದ ರಂಗ, ರಂಗಭೂಮಿ ಮತ್ತು ರಂಗಶಿಕ್ಷಣ, ಬಯಲಾಟ ಮೊದಲಾದ ಮಾದರಿಯ ಹತ್ತಕ್ಕೂ ಹೆಚ್ಚು ವಿವಿಧ ಕಾರ್ಯಾಗಾರದ 10 ದಿನಗಳ ಕಾಲ ನಡೆದ 250ಕ್ಕೂ ಅಧಿಕ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಶಿಬಿರಾರ್ಥಿಗಳು ಹಾಗೂ ಕಲಾವಿದರು ಉಪಸ್ಥಿತರಿದ್ದರು.

# ಸೃಷ್ಟಿ ಕಿರಣ್ 13 ವರ್ಷದ ವಿಶ್ವದ ನಂಬರ್ ಒನ್ ಆಟಗಾರ್ತಿ



**ನವದೆಹಲಿ,ಜೂ.11**–ಭಾರತದಲ್ಲಿ ಇತ್ತೀಚಿನ ದಿನಗಳಲ್ಲಿ ಟೆನಿಸ್ ಜನಪ್ರಿಯವಾಗಿದೆ, ಆದರೆ ದೇಶದಲ್ಲಿ ಸಿಂಗಲ್ಸ್‌ನಲ್ಲಿ ಇದುವರೆಗೆ ಟಾಪ್ –10 ಆಟಗಾರ್ತಿಯರಿಲ್ಲ. ವಿಜಯ್ ಅಮೃತರಾಜ್ 1980 ರಲ್ಲಿ 18 ನೇ ಸ್ಥಾನ ತಲುಪಿದರು, ಆದರೆ ಅಂದಿನಿಂದ, ಭಾರತವು ಶ್ರೇಯಾಂಕದಲ್ಲಿ ಅಗ್ರಸ್ಥಾನವನ್ನು ತಲುಪುವ ಸಾಮರ್ಥ್ಯವಿರುವ ಆಟಗಾರರನ್ನು ತಯಾರು ಮಾಡಲು ಹೆಣಗಾಡುತ್ತಿದೆ. ಆದರೆ, ಬೆಂಗಳೂರಿನ ಸೃಷ್ಟಿ ಕಿರಣ್ 13 ವರ್ಷದೊಳಗಿನವರ ವಿಭಾಗದಲ್ಲಿ ನಂ. 1 ಶ್ರೇಯಾಂಕವನ್ನು ಸಾಧಿಸಿದ್ದಾರೆ ಎಂದು ಭಾರತ ಹೆಮ್ಮೆಪಡುತ್ತದೆ. ಕಳೆದ ಕೆಲವು ತಿಂಗಳುಗಳಲ್ಲಿ ಸೃಷ್ಟಿ ಅದ್ಭುತ ಪ್ರದರ್ಶನ ನೀಡಿದ್ದಾರೆ, ಕಳೆದ ವಾರ ಗ್ವಾಟೆಮಾಲಾದಲ್ಲಿ ನಡೆದ ವರ್ಲ್ಡ್ ಟೆನಿಸ್ ಟೂರ್ ಜೂನಿಯರ್ಸ್ ಜೆ100 ಈವೆಂಟ್‌ನಲ್ಲಿ ಐದು ಐಟಿಎಫ್ ಜೂನಿಯರ್ ಪ್ರಶಸ್ತಿಗಳನ್ನು ಗೆದ್ದಿದ್ದಾರೆ.ಮತ್ತು ರನ್ನರ್–ಅಪ್ ಸ್ಥಾನ ಪಡೆದಿದ್ದಾರೆ. ಅವರು ಐಟಿಎಫ್ ಜೂನಿಯರ್ ಶ್ರೇಯಾಂಕದಲ್ಲಿ 357 ರ ವೃತ್ತಿಜೀವನದ ಉನ್ನತ ಶ್ರೇಯಾಂಕವನ್ನು ಸಾಧಿಸಿದ್ದಾರೆ, ಇದು 13 ವರ್ಷದೊಳಗಿನ ಆಟಗಾರರಲ್ಲಿ ಅತ್ಯುನ್ನತವಾಗಿದೆ.

ಸೃಷ್ಟಿ ತನ್ನ ಪ್ರತಿಸ್ಪರ್ಧಿಗಳಿಗಿಂತ ಕಡಿಮೆ ಪಂದ್ಯಾವಳಿಗಳನ್ನು ಆಡುವ ಮೂಲಕ ಈ ಯಶಸ್ಸನ್ನು ಸಾಧಿಸಿದ್ದಾಳೆ. ಐಟಿಎಫ್ ಜೂನಿಯರ್ ಶ್ರೇಯಾಂಕಗಳನ್ನು ಗರಿಷ್ಠ 10 ಈವೆಂಟ್‌ಗಳಿಂದ ಲೆಕ್ಕಹಾಕಲಾಗುತ್ತದೆ, ಆದರೆ ಆರ್ಥಿಕ ಮತ್ತು ವ್ಯವಸ್ಥಾಪನಾ ಸಮಸ್ಯೆಗಳಿಂದಾಗಿ ಅವರು ಕೇವಲ ಎಂಟರಲ್ಲಿ ಮಾತ್ರ ಭಾಗವಹಿಸಿದರು.

ಸೃಷ್ಟಿ ಬೆಂಗಳೂರಿನವರಾಗಿದ್ದು, ಅವರ ಪೋಷಕರು ವಿನಯ ಕಿರಣ್ ಮತ್ತು ಕಿರಣ್ ಗೋಪಾಲರಾಜನ್ ಚಿಲ್ಲರೆ ಮಾರಾಟ ಮಳಿಗೆ ನಡೆಸುತ್ತಿದ್ದಾರೆ. ಸೃಷ್ಟಿ ಬಾಲ್ಡ್ವಿನ್ಸ್ ಗರ್ಲ್ಸ್ ಹೈಸ್ಕೂಲ್‌ನಲ್ಲಿ ಎಂಟನೇ ತರಗತಿಯ ವಿದ್ಯಾರ್ಥಿನಿ. ಆಕೆಯ ತಂದೆ ಕ್ರಿಕೆಟಿಗರಾಗಬೇಕೆಂದು ಬಯಸಿದ್ದರು, ಆದರೆ ಅಧ್ಯಯನದ ಮೇಲೆ ಕೇಂದ್ರೀಕರಿಸಲು ಅದನ್ನು ತ್ಯಜಿಸಿದರು. ಅವರು ತಮ್ಮ ಕನಸನ್ನು ಸೃಷ್ಟಿ ಮೂಲಕ ನನಸಾಗಿಸಿದರು, ಅವರನ್ನು ಚಿಕ್ಕ ವಯಸ್ಸಿನಲ್ಲಿಯೇ ಕ್ರೀಡೆಗೆ ಪರಿಚಯಿಸಿದರು.

ಬೆಂಗಳೂರಿನ ಕರ್ನಾಟಕ ರಾಜ್ಯ ಲಾನ್ ಟೆನಿಸ್ ಅಸೋಸಿಯೇಷನ್‌ನಲ್ಲಿ ನಾಲ್ಕು ವರ್ಷ ಮತ್ತು ಆರು ತಿಂಗಳ ವಯಸ್ಸಿನಲ್ಲಿ ಶ್ರುತಿ ಟೆನಿಸ್ ಆಡಲು ಪ್ರಾರಂಭಿಸಿದರು. ಏಳನೇ ವಯಸ್ಸಿನಲ್ಲಿ, ಸತತ ಎಐಟಿಎ ಅಂಡರ್ –10 ಚಾಂಪಿಯನ್‌ಶಿಪ್‌ಗಳನ್ನು ಗೆದ್ದ ಭಾರತದ ಅತ್ಯಂತ ಕಿರಿಯ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಅವರು ಅಂಡರ್ –10 ಗ್ಲೋಬಲ್ ಜೂನಿಯರ್ ಟೂರ್ ದುಬೈ ಬೌಲ್ ಟೂರ್ನಮೆಂಟ್ ಸಹ ಗೆದ್ದರು ಮತ್ತು ಐಟಿಎಫ್ ವರ್ಲ್ಡ್ ಜೂನಿಯರ್ ಟೆನಿಸ್ ಪ್ರಾದೇಶಿಕ ಅರ್ಹತಾ ಪಂದ್ಯಾವಳಿಯಲ್ಲಿ ಭಾರತವನ್ನು ಸತತ ಎರಡು ಚಿನ್ನದ ಪದಕಗಳಿಗೆ ಕರೆದೊಯ್ದರು.

ಈ ಅದ್ಭುತ ಪ್ರದರ್ಶನ ಕುರಿತು ನನ್ನ ವಯಸ್ಸಿನ ಗುಂಪಿನಲ್ಲಿ ವಿಶ್ವ ನಂ. 1 ಸ್ಥಾನ ಪಡೆದಿರುವುದು ನನಗೆ ತುಂಬಾ ಸಂತೋಷ ತಂದಿದೆ. ವರ್ಷದ ಆರಂಭದಲ್ಲಿ ನಾನು ಊಹಿಸಿರಲಿಲ್ಲ, ಆದರೆ ನನ್ನ ತರಬೇತುದಾರ, ಕುಟುಂಬ ಮತ್ತು ಬೆಂಬಲ ತಂಡದೊಂದಿಗೆ ನಾನು ಮಾಡಿದ ಕಠಿಣ ಪರಿಶ್ರಮವು ಫಲ ನೀಡುತ್ತಿದೆ" ಎಂದು ಸೃಷ್ಟಿ ಹೇಳಿದ್ದಾರೆ.

# ಮಮತಾಗೆ ಶಾಕ್: ಟಿಎಂಸಿ ಸಂಸದ ಪ್ರಕಾಶ್ ಚಿಕ್ ಬರಾಕ್ ರಾಜೀನಾಮೆ



**ಹೊಸದೆಹಲಿ.ಜೂ11:** ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷದಲ್ಲಿ ಆಂತರಿಕ ಭಿನ್ನಮತ ತಾರಕಕ್ಕೇರಿದ್ದು, ಕೇವಲ ಒಂದೇ ವಾರದಲ್ಲಿ ಪಕ್ಷಕ್ಕೆ ಮೂರನೇ ಭಾರಿ ಆಘಾತ ಎದುರಾಗಿದೆ. ಟಿಎಂಸಿಯ ಹಿರಿಯ ರಾಜ್ಯಸಭಾ ಸಂಸದ ಪ್ರಕಾಶ್ ಚಿಕ್ ಬರಾಕ್ ಅವರು ಇಂದು ತಮ್ಮ ಸಂಸದ ಸ್ಥಾನಕ್ಕೆ ದಿಢೀರ್ ರಾಜೀನಾಮೆ ನೀಡಿದ್ದಾರೆ.

ಸುಖೇಂದು ಶೇಖರ್ ರಾಯ್ ಮತ್ತು ಸುಸ್ಮಿತಾ ದೇವ್ ಅವರ ಬೆನ್ನಲ್ಲೇ ಈಗ ಪ್ರಕಾಶ್ ಚಿಕ್ ಬರಾಕ್ ಕೂಡ ಹೊರನಡೆದಿರುವುದು ಮಮತಾ ಬ್ಯಾನರ್ಜಿ ಪಾಳಯದಲ್ಲಿ ತಲ್ಲಣ ಸೃಷ್ಟಿಸಿದೆ. ಗುರುವಾರ ಬೆಳಿಗ್ಗೆ ರಾಜ್ಯಸಭೆಯ ಸಭಾಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಭೇಟಿಯಾದ ಬರಾಕ್, ತಮ್ಮ ರಾಜೀನಾಮೆ ಪತ್ರವನ್ನು ಔಪಚಾರಿಕವಾಗಿ ಹಸ್ತಾಂತರಿಸಿದ್ದಾರೆ.

"ನಾನು ನನ್ನ ರಾಜ್ಯಸಭಾ ಸದಸ್ಯತ್ವಕ್ಕೆ ತಕ್ಷಣದಿಂದ ಜಾರಿಗೆ ಬರುವಂತೆ ರಾಜೀನಾಮೆ ನೀಡುತ್ತಿದ್ದೇನೆ. ನನ್ನ ಅಧಿಕಾರಾವಧಿಯಲ್ಲಿ ಸಹಕರಿಸಿದ ಗೌರವಾನ್ವಿತ ಸಭಾಪತಿಗಳು, ಉಪಸಭಾಪತಿಗಳು ಹಾಗೂ ರಾಜ್ಯಸಭಾ ಸಚಿವಾಲಯದ ಎಲ್ಲಾ ಅಧಿಕಾರಿಗಳಿಗೆ ನನ್ನ ಹೃತ್ಪೂರ್ವಕ ಕೃತಜ್ಞತೆಗಳು," ಎಂದು ಪ್ರಕಾಶ್ ಚಿಕ್ ಬರಾಕ್ ತಮ್ಮ ರಾಜೀನಾಮೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಪ್ರಕಾಶ್ ಚಿಕ್ ಬರಾಕ್ ರಾಜೀನಾಮೆಯಿಂದಾಗಿ ರಾಜ್ಯಸಭೆಯಲ್ಲಿ ತೃಣಮೂಲ ಕಾಂಗ್ರೆಸ್‌ನ ಸದಸ್ಯರ ಬಲ ಕೇವಲ 10ಕ್ಕೆ ಕುಸಿದಿದೆ. ಅಷ್ಟೇ ಅಲ್ಲದೆ, ಮುಂದಿನ ಒಂದು ವಾರದೊಳಗೆ ಟಿಎಂಸಿಯ ಇನ್ನೂ ಮೂವರು ರಾಜ್ಯಸಭಾ ಸಂಸದರು ರಾಜೀನಾಮೆ ನೀಡುವ ಸಾಧ್ಯತೆಯಿದೆ ಎಂದು ಮೂಲಗಳು ವರದಿ ಮಾಡಿದ್ದು, ಪಕ್ಷದ ಬಿಕ್ಕಟ್ಟು ಮತ್ತಷ್ಟು ಆಳವಾಗುವ ಮುನ್ಸೂಚನೆ ಸಿಕ್ಕಿದೆ.

ಪಶ್ಚಿಮ ಬಂಗಾಳದ ಉತ್ತರ ಭಾಗದ ಅಲಿಪುರ್ದುವಾರ್ ಜಿಲ್ಲೆಯವರಾದ ಪ್ರಕಾಶ್ ಚಿಕ್ ಬರಾಕ್, ಸಿಲಿಗುರಿ ವಲಯದ ಪ್ರಭಾವಿ ಬುಡಕಟ್ಟು (ಗಿರಿಜನ) ನಾಯಕರಾಗಿದ್ದಾರೆ. ಆಗಸ್ಟ್ 2023 ರಲ್ಲಿ ಟಿಎಂಸಿ ಟಿಕೆಟ್‌ನಿಂದ ಅವಿರೋಧವಾಗಿ ರಾಜ್ಯಸಭೆಗೆ ಆಯ್ಕೆಯಾಗಿದ್ದ ಅವರು, ತಮ್ಮ ಸಮುದಾಯದಿಂದ ಮೇಲ್ಮನೆಗೆ ಆಯ್ಕೆಯಾದ ಮೊದಲ ಬುಡಕಟ್ಟು ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಟಿಎಂಸಿ ಇವರನ್ನು ಅಲಿಪುರ್ದುವಾರ್ ಜಿಲ್ಲಾ ಅಧ್ಯಕ್ಷರನ್ನಾಗಿಯೂ ನೇಮಿಸಿತ್ತು. ಸಂಸತ್ತಿನಲ್ಲಿ ಚಹಾ ತೋಟದ ಕಾರ್ಮಿಕರ ಹಕ್ಕುಗಳು, ಪಿಎಫ್ ಸೌಲಭ್ಯಗಳು ಮತ್ತು ಸಾಮಾಜಿಕ ಯೋಜನೆಗಳ ಪರವಾಗಿ ಇವರು ಸದಾ ಧ್ವನಿ ಎತ್ತುತ್ತಿದ್ದರು.

ಕಳೆದ ಸೋಮವಾರವಷ್ಟೇ ಹಿರಿಯ ನಾಯಕ ಸುಖೇಂದು ಶೇಖರ್ ರಾಯ್ ಪಕ್ಷ ಹಾಗೂ ರಾಜ್ಯಸಭೆಗೆ ರಾಜೀನಾಮೆ ನೀಡಿದ್ದರು. ಅದರ ಬೆನ್ನಲ್ಲೇ ಬುಧವಾರ ಮಾಜಿ ಕಾಂಗ್ರೆಸ್ ನಾಯಕಿ ಹಾಗೂ ಟಿಎಂಸಿ ಸಂಸದೆಯಾಗಿದ್ದ ಸುಸ್ಮಿತಾ ದೇವ್ ತಮ್ಮ ಸ್ಥಾನಕ್ಕೆ ಕದನ ವಿರಾಮ ಘೋಷಿಸಿ ಹೊರನಡೆದಿದ್ದರು. ಇದೀಗ 24 ಗಂಟೆಗಳ ಒಳಗಾಗಿ ಬರಾಕ್ ಕೂಡ ರಾಜೀನಾಮೆ ನೀಡಿದ್ದಾರೆ.

ಪಶ್ಚಿಮ ಬಂಗಾಳ ವಿಧಾನಸಭೆಯಲ್ಲೂ ಟಿಎಂಸಿ ಶಾಸಕಾಂಗ ಪಕ್ಷದಲ್ಲಿ ಅಭೂತಪೂರ್ವ ಬಂಡಾಯ ಎದ್ದಿದೆ. ಪಕ್ಷದ ಅಧಿಕೃತ ಅಭ್ಯರ್ಥಿ ಶೋವಂದೇಬ್ ಚಟ್ಟೋಪಾಧ್ಯಾಯ ಅವರನ್ನು ತಿರಸ್ಕರಿಸಿರುವ ಬರೋಬ್ಬರಿ 58 ಶಾಸಕರು, ಬಂಡಾಯ ನಾಯಕ ರಿತಬ್ರತ ಬ್ಯಾನರ್ಜಿ ಅವರನ್ನು ವಿರೋಧ ಪಕ್ಷದ ನಾಯಕನನ್ನಾಗಿ ಬೆಂಬಲಿಸಿದ್ದಾರೆ. ಇದು ಟಿಎಂಸಿ ಇತಿಹಾಸದಲ್ಲೇ ಮಮತಾ ಬ್ಯಾನರ್ಜಿ ಎದುರಿಸುತ್ತಿರುವ ಅತ್ಯಂತ ದೊಡ್ಡ ಆಂತರಿಕ ಸವಾಲಾಗಿದೆ ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ.

# ಪ್ರಾಥಮಿಕ ಶಾಲೆಗೆ ಡಯಟ್ ಉಪನ್ಯಾಸಕ ಭೇಟಿ



**ಜೇವರಗಿ,ಜೂ.11:** ಶಿಕ್ಷಣ ಗುಣಮಟ್ಟ ಹೆಚ್ಚಿಸಲು ಡಯಟ್ ಶಾಲೆಯ ಉಪನ್ಯಾಸಕ ಮಲ್ಲಣ್ಣ ಸೋಮಜಾಳ ಅವರು ತಾಲೂಕಿನ ಕೋಳಕೂರ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದರು.ಶಾಲೆಯ ಎಲ್ಲಾ ಕೋಣೆಗಳನ್ನು ವೀಕ್ಷಿಸುವುದರೊಂದಿಗೆ ತರಗತಿ ವಾರು ಮಕ್ಕಳ ಹಾಜರಾತಿಯನ್ನು ಪರಿಶೀಲಿಸಿದರು.ನಂತರ ಶಿಕ್ಷಕರಿಗೆ ಸರಿಯಾದ ಸಮಯಕ್ಕೆ ಶಾಲೆಗೆ ಆಗಮಿಸುವುದು ,ಮತ್ತು ಮಕ್ಕಳ ಹಾಜರಾತಿಯನ್ನು ಹೆಚ್ಚಿಸುವುದು ,ಮಕ್ಕಳಿಗೆ ಒಳ್ಳೆಯ ಶಿಕ್ಷಣ , ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳನ್ನು ತೊಡಗಿಸಿ ಶಾಲೆಯನ್ನು ತಾಲೂಕಿನಲ್ಲಿಯೇ ಮಾದರಿಯ ಶಾಲೆಯನ್ನಾಗಿ ರೂಪಿಸುವುದು ನಿಮ್ಮ ಕೈಯಲ್ಲಿದೆ, ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಪಾಲಕರು ,ಪೋಷಕರು ,ಶಿಕ್ಷಣ ಪ್ರೇಮಿಗಳು ,ಗ್ರಾಮದ ಮುಖಂಡರು ಶಿಕ್ಷಕರಿಗೆ ಸಹಕರಿಸುವಂತೆ ಮನವಿಯ ಮೂಲಕ ಸಲಹೆ ನೀಡಿದರು.ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ಜಯಶ್ರೀ ,ಎಸ್ ಕಟ್ಟಿಸಂಗಾವಿ , ಯಸ್ತ್ರ, , ಲಕ್ಷ್ಮಿ ಪಾಟೀಲ್ ಹಾಗೂ ಎಸ್ಡಿಎಂಸಿ ಮಾಜಿ ಅಧ್ಯಕ್ಷ ಸಿದ್ದರಾಮ ಕಟ್ಟಿ ಉಪಸ್ಥಿತರಿದ್ದರು.

# ಅಮೆರಿಕ– ಇರಾನ್ ಸಂಘರ್ಷ ತೀವ್ರ



**ನವದೆಹಲಿ,ಜೂ. 11–** ಕೊಲ್ಲಿ ರಾಷ್ಟ್ರಗಳಲ್ಲಿ ಅಮೆರಿಕ ಹಾಗೂ ಇರಾನ್ ನಡುವಿನ ಸಂಘರ್ಷ ತೀವ್ರಗೊಂಡಿದ್ದು, ಯುದ್ಧದ ಪರಿಸ್ಥಿತಿ ಮತ್ತಷ್ಟು ವಿಕೋಪಕ್ಕೆ ತಿರುಗಿದೆ. ಮಾತುಕತೆಗಳು ಹಳಿತಪ್ಪಿರುವ ಹಿನ್ನೆಲೆಯಲ್ಲಿ ಅಮೆರಿಕ ಸೇನೆಯು ಇರಾನ್‌ನ ಪ್ರಮುಖ ನಗರಗಳ ಮೇಲೆ ಇಂದು ಬೆಳಿಗ್ಗೆ ಭೀಕರ ವೈಮಾನಿಕ ದಾಳಿ ನಡೆಸಿದೆ. ಇದಕ್ಕೆ ತಕ್ಕ ಪ್ರತ್ಯುತ್ತರ ನೀಡಿರುವ ಇರಾ , ಬಹ್ರೇನ್ ಮತ್ತು ಕುವೈತ್‌ನಲ್ಲಿರುವ ಅಮೆರಿಕದ ಪ್ರಮುಖ ಸೇನಾ ನೆಲೆಗಳ ಮೇಲೆ ಭಾರಿ ಪ್ರಮಾಣದ ಕ್ಷಿಪಣಿ ದಾಳಿ ನಡೆಸಿ ಎದಿರೇಟು ನೀಡಿದೆ.

ಫೆಬ್ರವರಿ 28 ರಂದು ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ಇರಾನ್ ವಿರುದ್ಧ ಮಿಲಿಟರಿ ಕಾರ್ಯಾಚರಣೆ ಆರಂಭಿಸಿದಾಗಿನಿಂದ ಇಡೀ ವಿಶ್ವದ ಆರ್ಥಿಕತೆ ತಲ್ಲಣಗೊಂಡಿದ್ದು, ಇಂಧನ ಮತ್ತು ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ. ಈ ನಡುವೆ ಏರ್ಪಟ್ಟಿದ್ದ ತಾತ್ಕಾಲಿಕ ಕದನ ವಿರಾಮವು ಕೇವಲ ಎರಡು ತಿಂಗಳಲ್ಲಿ ಸಂಪೂರ್ಣವಾಗಿ ಮುರಿದುಬಿದ್ದಂತಾಗಿದೆ.

ಇರಾನ್‌ನ ಹಲವು ನಗರಗಳಲ್ಲಿ ಸರಣಿ ಸ್ಫೋಟಅಮೆರಿಕದ ಸೆಂಟ್ರಲ್ ಕಮಾಂಡ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆದೇಶದ ಮೇರೆಗೆ ಇರಾನ್‌ನ ಮಿಲಿಟರಿ ಕಣ್ಗಾವಲು ಕೇಂದ್ರಗಳು, ಸಂವಹನ ವ್ಯವಸ್ಥೆಗಳು ಮತ್ತು ವಾಯು ರಕ್ಷಣಾ ನೆಲೆಗಳನ್ನು ಗುರಿಯಾಗಿಸಿಕೊಂಡು ನಿಖರ ದಾಳಿ ನಡೆಸಿದೆ. ಇರಾನ್‌ನ ದಕ್ಷಿಣ ಕರಾವಳಿ ನಗರಗಳಾದ ಬಂದರ್ ಅಬ್ಬಾಸ್, ಸಿರಿಕ್, ಮಿನಾಬ್ ಹಾಗೂ ಕಂಗನ್ ಸೇರಿದಂತೆ ಕೇಶ್ಮ್ ಮತ್ತು ಹೆಂಗಮ್ ದ್ವೀಪಗಳಲ್ಲಿ ಭೀಕರ ಸ್ಫೋಟಗಳು ಸಂಭವಿಸಿದ್ದು, ವಾಯು ರಕ್ಷಣಾ ವ್ಯವಸ್ಥೆಗಳು ಸಕ್ರಿಯಗೊಂಡಿವೆ ಎಂದು ಇರಾನ್ ಮಾಧ್ಯಮಗಳು ಖಚಿತಪಡಿಸಿವೆ.ಇರಾನ್ ಐಆರ್‌ಜಿಸಿ ಎಚ್ಚರಿಕೆಅಮೆರಿಕದ ದಾಳಿಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ವೈಮಾನಿಕ ಪಡೆಯ ಕಮಾಂಡರ್ ಬ್ರಿಗೇಡಿಯರ್ ಜನರಲ್ ಮಜೀದ್ ಮೂಸವಿ ತೀವ್ರ ಎಚ್ಚರಿಕೆ ನೀಡಿದ್ದಾರೆ."ನೀವೇನಾದರೂ ಕಾರ್ಯತಂತ್ರದ ದೃಷ್ಟಿಯಿಂದ ಪವಿತ್ರವಾದ ಹಾರ್ಮುಜ್ ಜಲಸಂಧಿಯನ್ನು ಅಸುರಕ್ಷಿತಗೊಳಿಸಲು ಯತ್ನಿಸಿದರೆ, ಇಡೀ ಇರಾನ್‌ನಾದ್ಯಂತ ನಿಮ್ಮ ವಿರುದ್ಧ ದಾಳಿ ನಡೆಸಿ ಇಡೀ ಪ್ರದೇಶವನ್ನೇ ನಿಮಗೆ ನರಕವನ್ನಾಗಿ ಮಾಡುತ್ತೇವೆ," ಎಂದು ಅವರು ಗುಡುಗಿದ್ದಾರೆ.ಅಲ್ಲದೆ, ಹೋರ್ಮುಜ್ ಜಲಸಂಧಿಯ ಮೂಲಕ ಸಂಚರಿಸುವ ಯಾವುದೇ ವಾಣಿಜ್ಯ ಅಥವಾ ತೈಲ ಹಡಗುಗಳ ಮೇಲೆ ದಾಳಿ ನಡೆಸಲಾಗುವುದು ಎಂದು ಇರಾನ್ ಮಿಲಿಟರಿ ಕಮಾಂಡ್ ಘೋಷಿಸಿದೆ.ಬಹ್ರೇನ್, ಕುವೈತ್‌ನ ಅಮೆರಿಕ ಸೇನಾ ನೆಲೆಗಳ ಮೇಲೆ ಇರಾನ್ ಪ್ರತಿದಾಳಿಅಮೆರಿಕದ ವಾಯುದಾಳಿಗೆ ತಕ್ಷಣವೇ ಪ್ರತಿಕ್ರಿಯಿಸಿರುವ ಇರಾನ್‌ನ ಐಆರ್‌ಜಿಸಿ ಪಡೆಗಳು ಬಹ್ರೇನ್ ಮತ್ತು ಕುವೈತ್‌ನಲ್ಲಿರುವ ಅಮೆರಿಕದ ಸೇನಾ ನೆಲೆಗಳ ಮೇಲೆ ಎರಡು ಹಂತಗಳ ಭಾರಿ ಕ್ಷಿಪಣಿ ದಾಳಿ ನಡೆಸಿವೆ. ಕುವೈತ್‌ನ ಅಲಿ ಮತ್ತು ಅಹ್ಮದ್ ಏರ್ ಫೋರ್ಸ್ ಬೇಸ್‌ಗಳಲ್ಲಿರುವ ಸುಮಾರು 18 ಪ್ರಮುಖ ಅಮೆರಿಕ ಮಿಲಿಟರಿ ಗುರಿಗಳನ್ನು ಧ್ವಂಸಗೊಳಿಸಲಾಗಿದೆ ಎಂದು ಇರಾನ್‌ನ ಐಆರ್‌ಎನ್‌ಎ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಜೊತೆಗೆ ಬಹ್ರೇನ್‌ನಲ್ಲಿರುವ ಅಮೆರಿಕದ ಐದನೇ ನೌಕಾಪಡೆಯ ಪ್ರಧಾನ ಕಚೇರಿ ಹಾಗೂ ಶೇಖ್ ಇಸಾ ವಾಯು ನೆಲೆಯನ್ನೂ ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದ್ದು, ಬಹ್ರೇನ್‌ನಾದ್ಯಂತ ಸೈರನ್ ಸದ್ದು ಮೊಳಗಿದೆ. ಜನರನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಬಹ್ರೇನ್ ಆಂತರಿಕ ಸಚಿವಾಲಯ ಸೂಚಿಸಿದೆ.

ಪ್ರಮುಖಾಂಶಗಳು ಮಾತುಕತೆ ಹಳಿತಪ್ಪಿದ್ದಕ್ಕೆ ದಾಳಿ: ಇರಾನ್ ಒಪ್ಪಂದಕ್ಕೆ ಸಹಿ ಹಾಕದಿದ್ದರೆ ಮಿಲಿಟರಿ ಕಾರ್ಯಾಚರಣೆ ಮತ್ತಷ್ಟು ತೀವ್ರಗೊಳ್ಳಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಡಕ್ ಎಚ್ಚರಿಕೆ ನೀಡಿದ್ದಾರೆ.

ಹೋರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ಮುಚ್ಚಲಾಗಿದೆ ಎಂದು ಇರಾನ್ ಹೇಳಿಕೊಂಡಿದ್ದರೂ, ವಾಣಿಜ್ಯ ಹಡಗುಗಳ ಸಂಚಾರ ಮುಂದುವರಿದಿದೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ಸ್ಪಷ್ಟಪಡಿಸಿದೆ.ಜಾಗತಿಕ ಆರ್ಥಿಕತೆಗೆ ಪೆಟ್ಟು: ಈ ಯುದ್ಧದಿಂದಾಗಿ ತೈಲ ಪೂರೈಕೆಯಲ್ಲಿ ಭಾರಿ ವ್ಯತ್ಯಯ ಉಂಟಾಗಿದ್ದು, ಜಾಗತಿಕ ಇಂಧನ ಬಿಕ್ಕಟ್ಟು ಎದುರಾಗಿದೆ.

ಅಮೆರಿಕ ದಾಳಿಗೆ ಮೂವರು ಭಾರತೀಯ ನಾವಿಕರು ಬಲಿ

ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ, ಒಮಾನ್ ಕರಾವಳಿಯ ಹೋರ್ಮುಜ್ ಜಲಸಂಧಿಯ ಬಳಿ ವಾಣಿಜ್ಯ ಸರಕು ಹಡಗಿನ ಮೇಲೆ ಅಮೆರಿಕ ಮಿಲಿಟರಿ ನಡೆಸಿದ ಭೀಕರ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಮೃತಪಟ್ಟಿದ್ದಾರೆ.

ಪಲಾವ್ ಧ್ವಜ ಹೊಂದಿದ್ದ 'ಎಂ.ಟಿ. ಸೆಟ್ಟೆಬೆಲ್ಲೋ' ಎಂಬ ತೈಲ ಸಾಗಣೆ ನಾವಕೆಯಲ್ಲಿ ಒಟ್ಟು 24 ಭಾರತೀಯ ಸಿಬ್ಬಂದಿ ಪ್ರಯಾಣಿಸುತ್ತಿದ್ದರು. ಗಲ್ಫ್ ಆಫ್ ಒಮಾನ್ ಮೂಲಕ ಹಾದುಹೋಗುತ್ತಿದ್ದಾಗ ಈ ದಾಳಿ ನಡೆದಿದೆ. ಘಟನೆಯ ನಂತರ ನಾಪತ್ತೆಯಾಗಿದ್ದ ಮೂವರು ಭಾರತೀಯರು ಮೃತಪಟ್ಟಿರುವುದನ್ನು ಕೇಂದ್ರ ಹಡಗು ಮತ್ತು ಬಂದರು ಸಚಿವ ಸರ್ಬಾನಂದ್ ಸೋನೊವಾಲ್ ಇಂದು ಅಧಿಕೃತವಾಗಿ ಖಚಿತಪಡಿಸಿದ್ದಾರೆ.ಎಂ.ಟಿ. ಸೆಟ್ಟೆಬೆಲ್ಲೋ ಹಡಗಿನ ಮೇಲಿನ ದಾಳಿಯ ಸುದ್ದಿ ಅತ್ಯಂತ ದುರದೃಷ್ಟಕರ. ನಾಪತ್ತೆಯಾಗಿದ್ದ ಮೂವರು ಭಾರತೀಯ ನಾವಿಕರಲ್ಲಿ ಇಬ್ಬರ ಮೃತದೇಹಗಳು ಪತ್ತೆಯಾಗಿದ್ದು, ಮೂವರೂ ಮೃತಪಟ್ಟಿರುವುದು ದೃಢಪಟ್ಟಿದೆ. ಇದು ದೇಶದ ಕಡಲ ರಂಗಕ್ಕೆ ತುಂಬಲಾರದ ನಷ್ಟ. ಈ ಕಠಿಣ ಸಮಯದಲ್ಲಿ ಮೋದಿ ಸರ್ಕಾರವು ಸಂತ್ರಸ್ತ ಕುಟುಂಬಗಳ ಪರವಾಗಿ ನಿಲ್ಲಲಿದ್ದು, ಅಗತ್ಯವಿರುವ ಎಲ್ಲಾ ನೆರವು ನೀಡಲಿದೆ" ಎಂದು ಸಚಿವ ಸೋನೊವಾಲ್ ಸಾಮಾಜಿಕ ಜಾಲತಾಣ 'ಎಕ್ಸ್' ನಲ್ಲಿ ಸಂತಾಪ ಸೂಚಿಸಿದ್ದಾರೆ.

ಮೃತರ ಪಾರ್ಥಿವ ಶರೀರಗಳನ್ನು ಶೀಘ್ರವಾಗಿ ತಾಯ್ನಾಡಿಗೆ ತರಲು ಹಾಗೂ ರಕ್ಷಿಸಲ್ಪಟ್ಟ ಸಿಬ್ಬಂದಿಯನ್ನು ಸುರಕ್ಷಿತವಾಗಿ ವಾಪಸ್ ಕರೆತರಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮೈಕ್ರೋಕಂಟ್ರೋಲರ್ ಮಿನಿ ಪ್ರಾಜೆಕ್ಟ್ ಪ್ರದರ್ಶನ



**ಬಳ್ಳಾರಿ, ಜೂ.11**: ಬಳ್ಳಾರಿಯ ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ಎಂಜಿನಿಯರಿಂಗ್ ಕಾಲೇಜಿನ ಕಂಪ್ಯೂಟರ್ ಸೈನ್ ಮತ್ತು ಎಂಜಿನಿಯರಿಂಗ್ ವಿಭಾಗದ ವತಿಯಿಂದ 06–06–2026 ರಂದು ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗಾಗಿ ಮೈಕ್ರೋಕಂಟ್ರೋಲರ್ ಆಧಾರಿತ ಮಿನಿ ಪ್ರಾಜೆಕ್ಟ್ ಪ್ರದರ್ಶನವನ್ನು ಆಯೋಜಿಸಲಾಯಿತು.ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಮೈಕ್ರೋಕಂಟ್ರೋಲರ್ ತಂತ್ರಜ್ಞಾನವನ್ನು ಬಳಸಿಕೊಂಡು ವಿನೂತನ ಹಾಗೂ ಪ್ರಾಯೋಗಿಕ ಪ್ರಾಜೆಕ್ಟ್‌ಗಳನ್ನು ಪ್ರದರ್ಶಿಸಿದರು. ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ, ಸ್ವಜನಶೀಲತೆ ಹಾಗೂ ಸಮಸ್ಯೆ ಪರಿಹಾರ ಕೌಶಲ್ಯಗಳನ್ನು ವೃದ್ಧಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ತೀರ್ಪುಗಾರರಾಗಿ ಎಂ.ಟೆಕ್ ಸಂಯೋಜಕರಾದ ಡಾ. ಸ್ವಪ್ನ ಕುಲಕರ್ಣಿ ಹಾಗೂ ಡಾ. ಪಂಪಾಪತಿ ಅವರು ಭಾಗವಹಿಸಿ ವಿದ್ಯಾರ್ಥಿಗಳ ಪ್ರಾಜೆಕ್ಟ್‌ಗಳನ್ನು ಮೌಲ್ಯಮಾಪನ ಮಾಡಿದರು. ಅವರು ವಿದ್ಯಾರ್ಥಿಗಳ ಪ್ರಾಜೆಕ್ಟ್‌ಗಳಲ್ಲಿನ ಹೊಸತನ ಮತ್ತು ತಾಂತ್ರಿಕ ಅಂಶಗಳನ್ನು ಪ್ರಶಂಸಿಸಿ, ಭವಿಷ್ಯದಲ್ಲಿ ಇನ್ನಷ್ಟು ಸಂಶೋಧನಾ ಮನೋಭಾವವನ್ನು ಬೆಳೆಸಿಕೊಳ್ಳುವಂತೆ ಸಲಹೆ ನೀಡಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಮಹಾಬಲೇಶ್ವರಪ್ಪ ಅವರು ವಿದ್ಯಾ ರ್ಥಿಗಳಿಗೆ ಶುಭ ಹಾರೈಸಿ, ಇಂತಹ ಕಾರ್ಯಕ್ರಮಗಳು ವಿದ್ಯಾ ರ್ಥಿಗಳಲ್ಲಿ ತಾಂತ್ರಿಕ ಕೌಶಲ್ಯ ಮತ್ತದ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ ಎಂದು ತಿಳಿಸಿದರು.ವಿಭಾಗದ ಮುಖ್ಯಸ್ಥರಾದ ಡಾ. ಗಿರೀಶ ಎಚ್. ಅವರು ವಿದ್ಯಾರ್ಥಿಗಳ ಶ್ರಮವನ್ನು ಶ್ಲಾಘಿಸಿ, ತಂತ್ರಜ್ಞಾನ ಕ್ಷೇತ್ರದಲ್ಲಿ ನಿರಂತರ ಕಲಿಕೆ ಮತ್ತು ನವೀನತೆಯ ಮಹತ್ವವನ್ನು ಒತ್ತಿಹೇಳಿದರು.ಕಾರ್ಯಕ್ರಮದ ಸಂಚಾಲಕರಾದ ಶ್ರೀಮತಿ ಸುನಿತಾ ಎಸ್. ಅವರು ಕಾರ್ಯಕ್ರಮವನ್ನು ಯಶಸ್ವಿಯಾಗಿ ಸಂಘಟಿಸಿ, ವಿದ್ಯಾ ರ್ಥಿಗಳು ಹಾಗೂ ಸಿಬ್ಬಂದಿಯ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಿದರು.ಕಾರ್ಯಕ್ರಮದಲ್ಲಿ ಆದ್ಯಾ ಪಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಸದಸ್ಯರು ಭಾಗವಹಿಸಿ ಪ್ರದರ್ಶಿಸಲಾದ ಪ್ರಾಜೆಕ್ಟ್‌ಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

## ಸಮಾಜದಲ್ಲಿ ಅಂಗವಿಕಲರನ್ನು ಸಮಾನತೆ ಮತ್ತು ಗೌರವದಿಂದ ಕಾಣಬೇಕು: ಗಣೇಶ್ ಹೆಗಡೆ

**ಮರಿಯಮ್ಮನಹಳ್ಳಿ, ಜೂ.11:** ಸಮಾಜದಲ್ಲಿ ಅಂಗವಿಕಲರಿಗೆ ತಮ್ಮ ಅಂಗವೈಕಲ್ಯದ ಭಾವನೆಗಳು ಬರದಂತೆ ಆತ್ಮವಿಶ್ವಾಸ ಹೆಚ್ಚಿಸುವ ಕಾರ್ಯಗಳು ಆಗಬೇಕಿದೆ ಎಂದು ಬಿ.ಎಂ.ಎಂ. ಸಂಸ್ಥೆಯ ನಿರ್ದೇಶಕ ಗಣೇಶ್ ಹೆಗಡೆ ಅಭಿಪ್ರಾಯಪಟ್ಟರು.

ಅವರು ಬಿ.ಎಂ.ಎಂ.ಸಂಸ್ಥೆಯು ಆಯೋಜಿಸಿದ್ದ ಆಯ್ದ ಅಂಗವಿಕಲ ಫಲಾನುಭವಿಗಳಿಗೆ ಮೋಟಾರು ಚಾಲಿತ ತ್ರಿಚಕ್ರ ವಾಹನ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.ಸಮಾಜದಲ್ಲಿ ಅಂಗವಿಕಲರನ್ನು ಸಮಾನತೆ ಮತ್ತು ಗೌರವದಿಂದ ಕಾಣಬೇಕು. ಅಲ್ಲದೇ ಯಾವುದೇ ಭೇದ ಭಾವಗಳಿಲ್ಲದೇ ಸರಿಯಾದ ಮಾರ್ಗದರ್ಶನ ಮತ್ತು ಪ್ರೋತ್ಸಾಹ ನೀಡಬೇಕಿದೆ. ಸಾರ್ವಜನಿಕವಾಗಿ ಶಿಕ್ಷಣ, ಉದ್ಯೋಗ ಮತ್ತು ಸಾಮಾಜಿಕ ಚಟುವಟಿಕೆಗಳಲ್ಲಿ ಅವರು ಸಕ್ರೀಯವಾಗಿ ಭಾಗಿಯಾಗಲು ಸಹಕರಿಸಬೇಕು. ಅಲ್ಲದೇ ಅಂಗವಿಕಲರ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಪೂರಕ ವಾತಾವರಣ ಕಲ್ಪಿಸುವ ಹೊಣೆ ನಮ್ಮೆಲ್ಲರ ಮೇಲಿದೆ ಎಂದರು.ಇವರಿಗೆ ಶಿಕ್ಷಣ, ಉದ್ಯೋಗ, ನೀಡುವುದರ ಜೊತೆ ಸರಕಾರದ ವಿವಿಧ ಯೋಜನೆಗಳು, ಮೀಸಲಾತಿ ಹಾಗೂ ಆರ್ಥಿಕ ನೆರವಿನ ಯೋಜನೆಗಳು ಸಹ ಸಹಕಾರಿಯಾಗಿವೆ ಎಂದರು. ವಿಶೇಷವಾಗಿ ಸರಕಾರದ ಜೊತೆ ಅನೇಕ ಸಂಸ್ಥೆಗಳು ಅಂಗವಿಕಲರಿಗಾಗಿ ಕೃತಕ ಅಂಗಗಳು, ಗಾಲಿ ಕುರ್ಚಿಗಳು, ಶ್ರವಣ ಸಾಧನಗಳಂತಹ ಅನೇಕ ಉಪಕರಣಗಳನ್ನು ವಿತರಿಸುತ್ತಿರುವುದು ಪ್ರಶಂಸನೀಯ ಕಾರ್ಯವಾಗಿದ್ದು ಇವುಗಳ ಸದುಪಯೋಗವನ್ನು ಅಂಗವಿಕಲರು ಪಡೆದುಕೊಳ್ಳಬೇಕು ಎಂದರು.ಪ್ರಸಕ್ತ ಸಾಲಿನಲ್ಲಿ ಜಿ.ನಾಗಲಾಪುರ ಮತ್ತು ಡಣನಾಯಕನಕೆರೆ ಗ್ರಾ.ಪಂ.ನ ಆಯ್ದ 21 ಫಲಾನುಭವಿಗಳಿಗೆ ನಾವು ತ್ರಿಚಕ್ರ ವಾಹನಗಳನ್ನು ವಿತರಿಸುತ್ತಿದ್ದೇವೆ ಎಂದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ ಪ್ರಭು ಮಾತನಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯನಿರ್ವಾಹಕ ಅಧಿಕಾರಿ ವಿಮಲ್ ಸಿಂಗ್, ಹಣಕಾಸು ಮತ್ತು ವಾಣಿಜ್ಯ ವಿಭಾಗದ ಮುಖ್ಯಸ್ಥ ರಾಜೇಂದ್ರ ಮುಂದ್ರಾ, ಬಿ.ಎಂಎಂ.ಸಂಸ್ಥೆಯ ಅಧಿಕಾರಿಗಳಾದ ಗಿರೀಶ್ ಕಾಕನೂರು, ಹೆಚ್.ಜಹಾಂಗೀರ್, ಜೇಕಬ್ ಸುದರ್ಶನ, ಸಿ.ಎಸ್.ಆರ್. ಅರುಣ್ ಕುಮಾರ್ ಮಾರುತಿ.ಕೆ, ರೇವಣ್ಣ ಸೇರಿದಂತೆ ವಿವಿಧ ಗ್ರಾಮಗಳ ಮುಖಂಡರಾದ ಪ್ರಕಾಶ್ ಪೂಜಾರ್, ಕೃಷ್ಣನಾಯಕ್, ಮಜ್ಜಿ ನಾಗರಾಜ, ಕೆ.ವೆಂಕಟೇಶ್, ಜಾತಪ್ಪ, ಕಂಪಲೆಪ್ಪ, ಫಕೀರಪ್ಪ ಹಾಗೂ ಇತರರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE